MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 332 | ಶನಿವಾರ : 25-10-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 332 | SATURDAY : 25-10-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ರಾಜ್ಯಕ್ಕೆ ರಾಹುಲ್ ಭೇಟಿ ಕುತೂಹಲಕ್ಕೆಡೆ



**ಬೆಂಗಳೂರು, ಅ. 24–** ರಾಜ್ಯ ಕಾಂಗ್ರೆಸ್‌ನಲ್ಲಿ ಅಧಿಕಾರ ಹಂಚಿಕೆ, ಉತ್ತರಾಧಿಕಾರಿ ಚರ್ಚೆಗಳು ಬಿರುಸಾಗಿರುವಾಗಲೇ ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್‌ಗಾಂಧಿ ಬಿಹಾರ ಚುನಾವಣೆಯ ನಂತರ ರಾಜ್ಯಕ್ಕೆ ಭೇಟಿ ನೀಡುತ್ತಿರುವುದು ನವೆಂಬರ್ ಕ್ರಾಂತಿಗೆ ಮುನ್ನುಡಿ ಆಗಲಿದೆಯೇ ಎಂಬ ಚರ್ಚೆಗಳನ್ನು ಹುಟ್ಟು ಹಾಕಿದೆ.

ಬಿಹಾರ ವಿಧಾನಸಭಾ ಚುನಾವಣೆಯ ಫಲಿತಾಂಶ ಪ್ರಕಟವಾದ ನಂತರ ರಾಹುಲ್‌ಗಾಂಧಿಯವರು ನ. 19 ಅಥವಾ 20 ರಂದು ರಾಜ್ಯಕ್ಕೆ ಭೇಟಿ ನೀಡುವ ಸಾಧ್ಯತೆಗಳಿದ್ದು, ರಾಹುಲ್‌ಗಾಂಧಿಯವರ ರಾಜ್ಯ ಭೇಟಿ ನಾನಾ ವ್ಯಾಖ್ಯಾನಗಳಿಗೆ ಎಡೆಮಾಡಿ ಕೊಟ್ಟಿದೆ.

ನವೆಂಬರ್‌ನಲ್ಲಿ ರಾಜ್ಯದಲ್ಲಿ ಕ್ರಾಂತಿಯಾಗಲಿದೆ. ಅಧಿಕಾರ ಹಂಚಿಕೆ ಸೂತ್ರ ಜಾರಿಯಾಗುತ್ತದೆ ಎಂಬ ಚರ್ಚೆಗಳು ಬಿರುಸಾಗಿದ್ದು, ಇದರ ಜತೆಗೆ ಸಂಪುಟ ಪುನರ್ ರಚನೆಯಾಗಲಿದೆ. ಅಧಿಕಾರ ಹಂಚಿಕೆ ನೇಪಥ್ಯಕ್ಕೆ ಸರಿಯಲಿದೆ ಎಂಬ ಮಾತುಗಳು ಕೇಳಿ ಬರುತ್ತಿರುವಾಗಲೇ ರಾಹುಲ್‌ಗಾಂಧಿಯವರ ರಾಜ್ಯ ಭೇಟಿ ಕುತೂಹಲಕ್ಕೆ ಎಡೆಮಾಡಿ ಕೊಟ್ಟಿದೆ.

ಕಾಂಗ್ರೆಸ್‌ನಲ್ಲಿ ಬಣ ರಾಜಕೀಯ ಬಿರುಸಾಗಿದ್ದು, ಸಿದ್ದರಾಮಯ್ಯನವರ ಪರ ಇರುವವರು ಅಧಿಕಾರ ಹಂಚಿಕೆ ಇಲ್ಲ ಎಂದು ಹೇಳುತ್ತಿದ್ದರೆ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಬಣ ಕಾದು ನೋಡಿ, ಅಧಿಕಾರ ಹಂಚಿಕೆ ಸೂತ್ರ ಜಾರಿಯಾಗಲಿದೆ ಎಂದು ಪ್ರತಿಪಾದಿಸುತ್ತಿದೆ. ಇದು ಕಾಂಗ್ರೆಸ್‌ನಲ್ಲಿ ಆಂತರಿಕ ಸಂಘರ್ಷಕ್ಕೆ ಕಾರಣವಾಗಿದೆ.

## ನ.6 ರೊಳಗಾಗಿ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಅರ್ಹ ಮತದಾರರು ಹೆಸರು ನೊಂದಾಯಿಸಿಕೊಳ್ಳಿ: ಭೀಮರಾಯ

ಯುವ ಮಾರ್ಗ ಸುದ್ದಿ



**ಮಾನ್ವಿ,ಅ.24–** ಭಾರತ ಚುನಾವಣಾ ಆಯೋಗವು ಕರ್ನಾಟಕ ಕಲಬುರಗಿ ವಿಭಾಗದ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ನೂತನವಾಗಿ ಸಿದ್ದಪಡಿಸುವುದಕ್ಕಾಗಿ ನ.1 ಕ್ಕೆ ಅನ್ವಯವಾಗುವಂತೆ ಈಗಾಗಲೇ ಪ್ರಾರಂಭಾವಾಗಿದ್ದು ಹಿಂದಿನ ಮತದಾರರ ಪಟ್ಟಿಯಲ್ಲಿ ಹೆಸರಿರುವ ಮತದಾರರು ಕೂಡ ನಮೂನೆ –19ರಲ್ಲಿ ಹೊಸದಾಗಿ ಅರ್ಜಿಗಳನ್ನು ಸಲ್ಲಿಸಬೇಕಾಗಿರುತ್ತದೆ. ರಾಜ್ಯದೊಳಗಿನ ಯಾವುದೇ ಸರ್ಕಾರದಿಂದ ಮಾನ್ಯತೆ ಪಡೆದ ಶೈಕ್ಷಣಿಕ ಸಂಸ್ಥೆಯಲ್ಲಿ ಕನಿಷ್ಠ 3 ವರ್ಷಗಳ ಕಾಲ ಭೋದಾನವೃತ್ತಿಯಲ್ಲಿ ನಿರತರಾಗಿರುವ ಪ್ರತಿಯೊಬ್ಬರು ಕೂಡ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರುಗಳನ್ನು ಸೇರಿಸಲು ಅರ್ಹನಾಗಿರುತ್ತಾರೆ. ನ.6 ರಂದು ಅರ್ಜಿ ನಮೂನೆ 19ರಲ್ಲಿ ಅರ್ಜಿಯನ್ನು ಸ್ವಕರಿಸುವ ಕೊನೆಯ ದಿನವಾಗಿರುತ್ತದೆ. ನ.25 ರಂದು ಕರಡು ಮತದಾರರ ಪಟ್ಟಿ ಪ್ರಕಟಿಸುವ ದಿನ, ನ.25 ರಿಂದ ಡಿ.10 ರವರೆಗೆ ಹಕ್ಕು ಮತ್ತು ಅಕ್ಷೇಪಣೆಗಳನ್ನು ಸಲ್ಲಿಸುವುದಕ್ಕೆ ನಿಗದಿ ಪಡಿಸಲಾಗಿದೆ.ಡಿ.30 ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸುವ ದಿನವಾಗಿದೆ ಅದ್ದರಿಂದ ತಾಲೂಕಿನ ಅರ್ಹ ಮತದಾರರು ತಮ್ಮ ಹೆಸರುಗಳನ್ನು ಮತದಾರರ ಪಟ್ಟಿಯಲ್ಲಿ ಮಾರ್ಗಸೂಚಿಗಳಿಗೆ ಅನುಗುಣವಾಗಿ ತಹಸೀಲ್ದಾರ್ ಕಚೇರಿಯಲ್ಲಿನ ಸಹಾಯಕ ಮತದಾರರ ನೋದಾಣಿಧಿಕಾರಿಯವರಲ್ಲಿ ನೊಂದಾಯಿಸಿಕೊಳ್ಳಬಹುದಾಗಿದೆ ಎಂದು ಸಹಾಯಕ ಮತದಾರರ ನೋದಾಣಿಧಿಕಾರಿಗಳು ಹಾಗೂ ತಹಸೀಲ್ದಾರ್ ಭೀಮರಾಯ ಬಿ.ರಾಮಸಮುದ್ರರವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಶಾಸಕ ಮಾನಪ್ಪ ವಜ್ಜಲ್ ಕಛೇರಿ ಮುಂದೆ 28ರಂದು ಅನಿರ್ದಿಷ್ಟಾವಧಿ ಧರಣಿ : ಶರಣಗೌಡ

ಯುವ ಮಾರ್ಗ ಸುದ್ದಿ




**ಲಿಂಗಸುಗೂರು,ಅ.24–**ಬಿಲ್ ಪಾವತಿ ಮಾಡದ ಎನ್‌ಡಿ ವಡ್ಡರ್ ಕಂಪನಿಯ ಮಾಲೀಕರಾದ ಮಾನಪ್ಪ ವಜ್ಜಲ್ ಇವರ ಕಛೇರಿ ಮುಂದೆ 28 ರಿಂದ ಅರ್ನಿಷ್ಟಾವಧಿ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು ಎಂದು ಶರಣಗೌಡ ಸಂಕೇಶ್ವರಹಾಳ ತಿಳಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಎನ್‌ಡಿ ವಡ್ಡರ್ ಕಂಪನಿಗೆ ಸರ್ಕಾರ ಹೀಗಾಗಲೇ 375.3 ಕೋಟಿ ಬಿಲ್ ಪಾವತಿ ಮಾಡಿದ್ದರೂ ಸಹ ನಮಗೆ ಇನ್ನು ಬಿಲ್ ಪಾವತಿಯಾಗಿಲ್ಲ. ಈ ಕುರಿತು 15 ಅಕ್ಟೋಬರ್ ರಿಂದ ಇಲ್ಲಿಯವರೆಗೆ ಧರಣಿ ನಡೆಸುತ್ತಿದ್ದೇವೆ ಆದರೆ ಇಲ್ಲಿಯವರೆಗೆ ಕಂಪನಿಯವರಾಗಲಿ ಅಥವಾ ಶಾಸಕ ಮಾನಪ್ಪ ವಜ್ಜಲ್‌ರವರಾಗಲಿ ನಮ್ಮ ಧರಣಿಗೆ ಸ್ಪಂದಿಸುತ್ತಿಲ್ಲ. ಅಲ್ಲದೇ ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿದ್ದೇವೆ. ಆಯುಕ್ತರು ಮಾನ್ಯ ಸಭಾಪತಿ ಯವರಿಗೆ ನಮ್ಮ ಮನವಿಯನ್ನು ಕಳುಹಿಸಿ ದ್ದಾರೆ. ಕಂಪನಿಯವರು ಹಾಗೂ ಶಾಸಕ ಮಾನಪ್ಪ ವಜ್ಜಲ್ ಸುಳ್ಳು ಹೇಳುತ್ತಾ ಕಾಲಹರಣ ಮಾಡುತ್ತಿದ್ದಾರೆ. ಅಲ್ಲದೇ ನಮಗೆ ಜೀವಬೇದರಿಕೆ ಹಾಕಿ ಬಿಲ್ ಪಾವತಿ ಮಾಡುತ್ತಿಲ್ಲ ಆದ್ದರಿಂದ ಇವರ ಧೋರಣೆಯನ್ನು ಖಂಡಿಸಿ 28 ರಿಂದ ಶಾಸಕರ ಕಛೇರಿ ಮುಂದೆ ಅರ್ನಿಷ್ಟಾವಧಿ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳುತ್ತಿದ್ದೇವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಗುತ್ತಿಗೆದಾರರಾದ ಅಂಜಿನಯ್ಯ ಬಡಿಗೇರ, ರಂಗಪ್ಪ ಮಷ್ಠೂರು, ಶಿವುಕುಮಾರ ಸಾಹುಕಾರ, ಅಮರೇಶ ಇಟಗಿ ಸೇರಿ ಇತರರು ಇದ್ದರು.

## ಚುಟುಕು ಸಾಹಿತ್ಯ ಪರಿಷತ್ತು ವತಿಯಿಂದ ಪ್ರತ್ಯೇಕ ಕನ್ನಡ ಧ್ವಜಕ್ಕೆ ಒತ್ತಾಯಿಸಿ ಮುಖ್ಯಮಂತ್ರಿಗಳಿಗೆ ಮನವಿ

ಯುವ ಮಾರ್ಗ ಸುದ್ದಿ



**ಮಾನ್ವಿ,ಅ.24–**ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ಚುಟುಕು ಸಾಹಿತ್ಯ ಪರಿಷತ್ತು ತಾಲೂಕು ಘಟಕದವತಿಯಿಂದ ಮುಖ್ಯಮಂತ್ರಿಗಳಿಗೆ ಉಪತಹಸೀಲ್ದಾರ್ ವಿನಾಯಕರಾವ್ ರವರ ಮೂಲಕ ಚುಟುಕು ಸಾಹಿತ್ಯ ಪರಿಷತ್ತು ತಾಲೂಕು ಘಟಕದ ಅಧ್ಯಕ್ಷರಾದ ಮಹ್ಮದ್ ಮುಜೀಬ್ ಮನವಿ ಸಲ್ಲಿಸಿ ಮಾತನಾಡಿ 1956 ರಲ್ಲಿ ಕನ್ನಡ ಭಾಷಿಕರನ್ನು ಒಳಗೊಂಡು ಮೈಸೂರು ರಾಜ್ಯವೆಂದು ಏಕಿಕರಣ ಗೊಂಡ ನಂತರ 1973 ರಲ್ಲಿ ನ.1 ರಂದು ಅಂದಿನ ಮುಖ್ಯಮಂತ್ರಿ ದೇವರಾಜ್ ಅರಸು ರವರಿಂದ ಕರ್ನಾಟಕ ರಾಜ್ಯ ಎಂದು ಮರುನಾಮಕರಣಗೊಂಡು 50 ವರ್ಷಗಳು ಕಳೆದ ನಂತರವು ಒಂಬತ್ತು ಜನರ ಸಮಿತಿಯು ಹಳದಿ ಮತ್ತು ಕೆಂಪು,ಬಿಳಿ ಹಾಗೂ ಹಳದಿ ಅಥಾವ ಕೆಂಪು ,ಹಳದಿ ಬಣ್ಣದ ಕನ್ನಡ ಧ್ವಜಕ್ಕೆ ಸರ್ಕಾರ ಇದುವರೆಗೂ ಮಾನ್ಯತೆ ನೀಡಿಲ್ಲ ನಾಡಿನ ಹಿರಿಯ ಸಾಹಿತಿಗಳು ಹಾಗೂ ಕನ್ನಡ ಪರ ಸಂಘಟನೆಗಳವರು ಕೂಡ ಪ್ರತ್ಯಕ ಕನ್ನಡ ಧ್ವಜಕ್ಕೆ ಒತ್ತಾಯಿಸಿದ್ದರು. ತಮ್ಮ ಅವಧಿಯಲ್ಲಿ ನಾಡಧ್ವಜಕ್ಕೆ ಮಾನ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಹಾದೇವಪ್ಪ, ಜೆ.ಪಿ.ಅಮರೇಶ,ಬಸವರಾಜ ಸುಂಕೇಶ್ವರ, ಆಂಜನೇಯ ನಸಲಾಪುರ, ರಾಮಪ್ಪ ಹೊಳೆಯಪ್ಪನವರ್,ದೊಡ್ಡಪ್ಪ ಹೂಗಾರ,ವಿಶ್ವನಾಥ.ಬಿ.ನಂದಿಹಾಳ್ ಸೇರಿದಂತೆ ಇನ್ನಿತರರು ಇದ್ದರು.

## ಬಸ್‌ಗೆ ಬೆಂಕಿಗಾಪುತಿ 20 ಸಾವು



**ಕರ್ನೂಲ್,ಅ.24–**ಹೈದರಾಬಾದ್‌ನಿಂದ ಬೆಂಗಳೂರಿಗೆ ತೆರಳುತ್ತಿದ್ದ ಕಾವೇರಿ ಟ್ರಾವೆಲ್ಸ್ ಗೆ ಸೇರಿದ ಐಷಾರಾಮಿ ವೋಲ್ವೋ ಬಸ್ ಶುಕ್ರವಾರ ನಸುಕಿನಲ್ಲಿ ಜಿಲ್ಲೆಯಲ್ಲಿ ಬೆಂಕಿಗಾಹುತಿಯಾಗಿ 20 ಮಂದಿ ಸಜೀವ ದಹನಗೊಂಡು ಹಲವರು ಗಾಯಗೊಂಡಿದ್ದಾರೆ.

ಕರ್ನೂಲ್ ಉಪನಗರ ಚಿನ್ನಟೇಕೂರಿನಲ್ಲಿ ರಾಷ್ಟ್ರೀಯ ಹೆದ್ದಾರಿ 44 ರಲ್ಲಿ ವೇಮುರಿ ಕಾವೇರಿ ಟ್ರಾವೆಲ್ಸ್‌ಗೆ ಸೇರಿದ ವೋಲ್ವೋ ಬಸ್ ಬೆಂಕಿಗಾಹುತಿಯಾಗಿ ಬಸ್‌ನಲ್ಲಿದ್ದ 41 ಮಂದಿಯಲ್ಲಿ, 20ಕ್ಕೂ ಹೆಚ್ಚು ಮಂದಿ ಸಜೀವ ದಹನವಾದರೆ, 19 ಮಂದಿ ಸಣ್ಣಪುಟ್ಟ ಗಾಯಗಳೊಂದಿಗೆ ಪಾರಾಗಿದ್ದಾರೆ.

ನತದೃಷ್ಟ ಬಸ್ಸಿನಲ್ಲಿ 39 ಮಂದಿ ವಯಸ್ಕರು ಮತ್ತು ಇಬ್ಬರು ಚಿಕ್ಕ ಮಕ್ಕಳು ಸೇರಿ 41 ಜನ ಇದ್ದರು. ಈವರೆಗೆ 11 ಶವಗಳನ್ನು ಹೊರತೆಗೆಯಲಾಗಿದ್ದು, ಅವರನ್ನು ಗುರುತಿಸುವ ಪ್ರಕ್ರಿಯೆ ಮುಂದುವರೆದಿದೆ. ಸುರಕ್ಷಿತವಾಗಿರುವ 19 ಜನರನ್ನು ಗುರುತಿಸಲಾಗಿದ್ದು, ಅವರಲ್ಲಿ ಹಲವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಡಿಐಜಿ ಪ್ರವೀಣ್ ಮಾಹಿತಿ ನೀಡಿದ್ದಾರೆ.

ರಾತ್ರಿ 10.30ಕ್ಕೆ ಹೈದರಾಬಾದ್‌ನಿಂದ ಬೆಂಗಳೂರಿಗೆ ಬರುತ್ತಿದ್ದ ಬಸ್‌ಗೆ ಕರ್ನೂಲ್ ನಗರದ ಹೊರವಲಯದಲ್ಲಿರುವ ಉಲಿಂದಕೊಂಡ ಬಳಿ ನಸುಕಿನ 3.30ರ ವೇಳೆ ಹಿಂದಿನಿಂದ ದ್ವಿಚಕ್ರ ವಾಹನ ಡಿಕ್ಕಿ ಹೊಡೆದಿದೆ. ಬಸ್‌ನ ಕೆಳಗೆ ಹೋಗಿ ಇಂಧನ ಟ್ಯಾಂಕ್‌ಗೆ ಬೈಕ್ ಡಿಕ್ಕಿ ಹೊಡೆದ ಪರಿಣಾಮ ಬೆಂಕಿ ಹೊತ್ತಿಕೊಂಡು ಬಸ್ ಸುಟ್ಟು ಕರಕಲಾಗಿದೆ.

ಗಾಢ ನಿದ್ರೆಯಲ್ಲಿದ್ದ ಪ್ರಯಾಣಿಕರು ಎಚ್ಚರಗೊಂಡು, ಕೆಲವರು ಸಹಾಯಕ್ಕಾಗಿ ಕಿರುಚಿಕೊಂಡು, ಬಸ್ಸಿನ ತುರ್ತು ಬಾಗಿಲು ಮುರಿದು ಹೊರಬಂದರೆ, ಇನ್ನೂ ಹಲವರು ಬೆಂಕಿಯಲ್ಲಿ ಸಿಲುಕಿಕೊಂಡು ಸಜೀವ ದಹನವಾಗಿದ್ದಾರೆ.

ಮಾಹಿತಿ ಪಡೆದ ಪೊಲೀಸರು ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆ(2ನೇಪುಟಕ್ಕೆ)

## ಅತಿವೃಷ್ಟಿಯಿಂದ ಬೆಳೆಹಾನಿಯಾದ ರೈತರಿಗೆ ಪರಿಹಾರ ನೀಡಿ: ಸೂಗುರಯ್ಯ ಆರ್.ಎಸ್.ಮಠ

ಯುವ ಮಾರ್ಗ ಸುದ್ದಿ



**ಮಾನ್ವಿ,ಅ.24–**ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ತಾಲೂಕು ಘಟಕದ ವತಿಯಿಂದ ತಹಸೀಲ್ದಾರ್ ರವರಿಗೆ ಉಪತಹಸೀಲ್ದಾರ್ ವಿನಾಯಕ್‌ರಾವ್ ರವರ ಮೂಲಕ ಮನವಿ ಸಲ್ಲಿಸಿ ಕರ್ನಾಟಕ ರಾಜ್ಯ ರೈತ ಸಂಘ ರಾಜ್ಯ ಕಾರ್ಯದರ್ಶಿ ಸೂಗುರಯ್ಯ ಆರ್.ಎಸ್.ಮಠ ಮಾತನಾಡಿ ತಾಲೂಕಿನಲ್ಲಿ ಅತಿವೃಷ್ಟಿಯಿಂದ ಬೆಳೆಹಾನಿಯಾದ ರೈತರ ವಿವಿಧ ಬೆಳೆಗಳನ್ನು ಪರಿಶೀಲಿಸಿ ಕೂಡಲೆ ಸರ್ಕಾರದಿಂದ ಅಗತ್ಯ ಪರಿಹಾರವನ್ನು ನೀಡಬೇಕು. ತಾಲೂಕಿನಲ್ಲಿ ರೈತರಿಗೆ ಕಳಪೆ ಬೀಜವನ್ನು ನೀಡಿ ಬೆಳೆ ನಷ್ಟಕ್ಕೆ ಕಾರಣರಾದ ಕೃಷಿ ಪರಿಕಾರಗಳ ಮಾರಾಟಗಾರರ ಮೇಲೆ ಸೂಕ್ತ ಕಾನೂನು ಕ್ರಮವನ್ನು ಕೃಷಿ ಇಲಾಖೆಯಿಂದ ತೆಗೆದುಕೊಳ್ಳಬೇಕು ಹಾಗೂ ಕಳಪೆ ಬೀಜದಿಂದ ನಷ್ಟಕ್ಕೆ ಒಳಗಾದ ರೈತರಿಗೆ ಸೂಕ್ತ ಪರಿಹಾರವನ್ನು ನೀಡಬೇಕು. ಮಾರುಕಟ್ಟೆಯಲ್ಲಿ ಜೋಳ,ಭತ್ತ,ತೊಗರಿ,ಹತ್ತಿ ಬೆಳೆಗಳ ಬೆಲೆ ಕಡಿಮೆಯಾಗಿರುವುದರಿಂದ ಕೂಡಲೇ ತಾಲೂಕಿನಲ್ಲಿ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಖರೀದಿ ಕೇಂದ್ರವನ್ನು ಪ್ರಾರಂಭಿಸಬೇಕು, ಹಾಗೂ ಜೋಳ ಬೆಳೆದ ರೈತರ ಜಮೀನುಗಳಿಗೆ ಜಿಪಿಎಸ್.ಪ್ರಕ್ರಿಯೆ ಪ್ರಾರಂಭಿಸಬೇಕು. ಹಾಗೂ ತಾಲೂಕಿನ ಜೋಳಬೆಳೆದ ರೈತರ ಜೋಳವನ್ನು ಮಾತ್ರ ಜೋಳ ಖರೀದಿ ಕೇಂದ್ರಗಳಲ್ಲಿ ಅವಕಾಶ ಕಲ್ಪಿಸಬೇಕು. ಗ್ರಾಮೀಣ ಭಾಗದ ಗ್ರಾಮಗಳಿಗೆ ಸಂಪರ್ಕ ರಸ್ತೆ ನಿರ್ಮಾಣ ಮಾಡಬೇ ಕು.ವಿದ್ಯುತ್ ಸಮಸ್ಯೆ ನಿವಾರಿಸಬೇಕು, ತಾಲೂಕಿನಲ್ಲಿ ಜೋಳ,ಹತ್ತಿ, ಮೆಣಸಿನಕಾಯಿ ಬೆಳೆಗಳಿಗೆ ನೀರಿನ ಅಗತ್ಯವಿದ್ದು ತುಂಗಭದ್ರಾ ಎಡದಂಡೆ ಕಾಮುವೇ ಉಪಕಾಲುವೆ ನಂ.76,82,89 ಕೆಳಭಾಗದ ಜಮೀನುಗಳಿಗೆ ಸಮರ್ಪಕವಾಗಿ ನೀರು ನಿರ್ವಹಣೆ ಮಾಡಬೇಕು. ರೈತರ ವಿವಿಧ ಬೇಡಿಕೆಗಳನ್ನು ಈಡೇರಿಸದೆ ಇದಲ್ಲಿ ಮುಂದಿನ ದಿನಗಳಲ್ಲಿ ಹೋರಾಟ ನಡೆಸಲಾಗುವುದು ಎಂದು ತಿಳಿಸಿದರು.

ಜಿಲ್ಲಾ ಕಾರ್ಯಾಧ್ಯಕ್ಷರಾದ ಬಸವರಾಜ ಮಾಲಿಪಾಟೀಲ್, ಜಿ.ಪ್ರ.ಕಾರ್ಯದರ್ಶಿ ಲಿಂಗಾರೆಡ್ಡಿ ಪಾಟೀಲ್, ಜಿ.ಸಂ. ಕಾರ್ಯದರ್ಶಿ ವೀರೇಶ ಗವಿಗಟ್,ತಾ. ಅಧ್ಯಕ್ಷರಾದ ಸಿದ್ದಯ್ಯಸ್ವಾಮಿ ಗೋರ್ಕಾಲ್, ತಾ.ಪ್ರ, ಕಾರ್ಯದರ್ಶಿ ಅಮರೇಶ ಅಲ್ದಾಳ್, ರೈತ ಮುಖಂಡರಾದ ಚಾಮರಸ ಜಾನೇಕಲ್,ಬಸವರಾಜ ತಡಕಲ್, ಮಲ್ಲೇಶನಾಯಕ, ಹನುಮಂತ ನಸ್ಲಾಪುರ್, ಗೋಪಿ ಮನೋಹರ, ಸೇರಿದಂತೆ ಇನ್ನಿತರರು ಇದ್ದರು.

## ಪ್ರಿಯಾಂಕ್ ಖರ್ಗೆ ಜೀವ ಬೆದರಿಕೆ ಹಾಕಿದ ಆರ್‌ಎಸ್‌ಎಸ್ ವಿರುದ್ಧ ಸೂಕ್ತ ಕ್ರಮಕ್ಕೆ ಕಾಂಗ್ರೆಸ್ ಕಾರ್ಯಕರ್ತರು ಒತ್ತಾಯ

ಯುವ ಮಾರ್ಗ ಸುದ್ದಿ




**ಲಿಂಗಸುಗೂರು,ಅ.24–**ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಜೀವ ಬೇದರಿಕೆ ಹಾಕಿ ಅವರನ್ನು ನಿಂಧಿಸುತ್ತಿರುವ ಆರ್‌ಎಸ್‌ಎಸ್ ಹಾಗೂ ಬಿಜೆಪಿ ಕಾರ್ಯಕರ್ತರನ್ನು ಸೂಕ್ತ ಕಾನೂನು ಕ್ರಮ ಜರುಗಿಸುವಂತೆ ಒತ್ತಾಯಿಸಿ ಲಿಂಗಸುಗೂರು ಹಾಗೂ ಮುದಗಲ್ ಬ್ಲಾಕ್ ಕಾಂಗ್ರೆಸ್ ವತಿಯಿಂದ ಬೃಹತ್ ಪ್ರತಿಭಟನೆ ಮಾಡಲಾಯಿತು.

ಪಟ್ಟಣದ ಅಂಬೇಡ್ಕರ್ ವೃತ್ತದಿಂದ ಸಹಾಯಕ ಆಯುಕ್ತರ ಕಛೇರಿ ವರೆಗೆ ಪ್ರತಿಭಟನಾ ರ್‍ಯಾಲಿ ನಡೆಸಿದರು. ಈ ಸಂದರ್ಭದಲ್ಲಿ ಮಾಜಿ ಶಾಸಕ ಹಾಗೂ ಕೆಪಿಸಿಸಿ ರಾಜ್ಯ ಉಪಾಧ್ಯಕ್ಷ ಡಿಎಸ್ ಹೂಲಗೇರಿ ಮಾತನಾಡಿದ ಉದ್ಯಾನ, ಸರ್ಕಾರಿ ಶಾಲಾ– ಕಾಲೇಜು, ಸರ್ಕಾರಿ ಮೈದಾನಗಳು, ಪುರಾತತ್ವ ಇಲಾಖೆ ಮೈದಾನಗಳಲ್ಲಿ ಬೈಠಕ್, ಸಭೆಗಳನ್ನು ನಡೆಸಲು ಸರ್ಕಾರ ಅನುಮತಿ ನೀಡಬಾರ ದೆಂದು ಪತ್ರ ಬರೆದಿದ್ದರು. ಇದನ್ನು ಆರ್.ಎಸ್.ಎಸ್ ನವರು ತಿರುಚಿದ್ದಾರೆ, ಎಂದು ಕಿಡಿಕಾರಿದರು. ಹಿಂದೂ–ಮುಸ್ಲಿಂ ನಡುವೆ ಕೋಮು ಭಾವನೆ ಉಂಟುಮಾಡುವುದೇ ಇವರ ತತ್ವ ಸಿದ್ಧಾಂತವಾಗಿದ್ದು, ಶಾಲಾ–ಕಾಲೇಜು ಆವರಣದಲ್ಲಿ ಬೈಠಕ್‌ಗಳು ನಡೆದಾಗ ವಿದ್ಯಾರ್ಥಿಗಳ ಮೇಲೆ ದುಷ್ಪರಿಣಾಮ ಬೀರುತ್ತದೆ. ಬಾಲ್ಯದಲ್ಲಿಯೇ ವಿದ್ಯಾರ್ಥಿಗಳ ಮನಸ್ಸಿನಲ್ಲಿ ಧರ್ಮಗಳ ನಡುವೆ ಅಸಮಾನತೆ, ದ್ವೇಷ, ಕೋಮು ಭಾವನೆ ಬಿತ್ತುವ ಕೆಲಸವಾಗುತ್ತದೆ. ಹೀಗಾಗಿ ಸರ್ಕಾರಿ ಸ್ಥಳಗಳಲ್ಲಿ ಆರ್.ಎಸ್.ಎಸ್‌ಗೆ ಅನುಮತಿ ನೀಡಬಾರದೆಂದು ಪ್ರಿಯಾಂಕ್ ಖರ್ಗೆ ಪತ್ರ ಬರೆದಿದ್ದಾರೆ. ಇದನ್ನು ತಪ್ಪಾಗಿ ತಿರುಚಲಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಆರ್‌ಎಸ್‌ಎಸ್ ನವರು ಮನು ಸಂಸ್ಕೃತಿ, ಮನುವಾದ, ವರ್ಣಾಶ್ರಮ, ಚಾತುವರ್ಣ ವ್ಯವಸ್ಥೆಯ ಮೇಲೆ ನಂಬಿಕೆ ಹಾಗೂ ವಿಶ್ವಾಸವುಳ್ಳವರು. ಆರ್‌ಎಸ್‌ಎಸ್ ನೋಂದಣಿಯಾಗದೇ ಇರುವ ಸಂಸ್ಥೆ, ತಮ್ಮ ಕಚೇರಿಯ ಮೇಲೆ ರಾಷ್ಟ್ರ ಧ್ವಜ ಹಾರಿಸಲಿಲ್ಲ ಹಾಗೂ ಮಾನ್ಯತೆ ನೀಡಿಲ್ಲ ಎಂದು ದೂರಿದರು.

ಈ ಸಂಧರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗೋವಿಂದನಾಯಕ, ಶಿವಶಂಕರಗೌಡ, ಅಹ್ಮದ್ ಬಾಬ, ಎಪಿಎಂಸಿ ಅಧ್ಯಕ್ಷ ಅಮರೇಶ ಹೆಸರೂರು, ವೆಂಕಟೇಶ ಗುತ್ತೇದಾರ, ಮಹ್ಮದ್ ರಫೀ, ಮುದಕಪ್ಪ ವಕೀಲ, ಜೀವನ ಬಾಳೇಗೌಡ, ಸಂತೋಷ ಸೋಪಿಮಠ, ಸಂಜೀವಪ್ಪ ಚಲುವಾದಿ, ಉಮೇಶ ಐಹೊಳೇರ, ಖಾಜಾಹುಸೇನ ಫೂಲ್‌ವಾಲೆ, ವಿಶ್ವಕ್ರಾಂತಿ ಹಾಗೂ ವಿವಿಧ ಕಾಂಗ್ರೆಸ್ ಘಟಕಗಳ ಮುಖಂಡರು ಹಾಗೂ ಕಾರ್ಯಕರ್ತರು ಇದ್ದರು.

## ಮೊದಲನೇಯ ಪುಟದಿಂದ

# ಬಸ್‌ಗೆ ಬೆಂಕಿಗಾವುತಿ 20 ಸಾವು

ನಡೆಸಿದರು. ಗಾಯಾಳುಗಳನ್ನು ಕರ್ನೂಲ್ ಜನರಲ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಇಡೀ ಬಸ್ ಸಂಪೂರ್ಣವಾಗಿ ಸುಟ್ಟುಹೋಗಿದ್ದು, ಹೆಚ್ಚಿನ ಪ್ರಯಾಣಿಕರು ಹೈದರಾಬಾದ್ ನಗರದವರಾಗಿದ್ದಾರೆ.

ಅಪಘಾತ ನಡೆದ ತಕ್ಷಣ ಬಸ್ ಚಾಲಕ ಹಾಗೂ ಸಿಬ್ಬಂದಿ ಸ್ಥಳದಿಂದ ಪರಾರಿಯಾಗಿದ್ದಾರೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ಘಟನೆ ಬಗ್ಗೆ ಪೊಲೀಸರು ತನಿಖೆ ಆರಂಭಿಸಿದ್ದು, ಬೈಕ್ ಸವಾರ ಕೂಡ ಸಾವನ್ನಪ್ಪಿದ್ದಾನೆ.ಪುಟ್ಟಪರ್ತಿಯಿಂದ ಹೈದರಾಬಾದ್‌ಗೆ ಬರುತ್ತಿದ್ದ ಹೈಮಾ ರೆಡ್ಡಿ, ಬಸ್‌ಗೆ ಬೆಂಕಿ ಹೊತ್ತಿಕೊಂಡಿರುವುದನ್ನು ನೋಡಿ ಬಸ್ ನಿಲ್ಲಿಸಿದ್ದಾರೆ. ನಂತರ ಪೊಲೀಸರಿಗೂ ಮಾಹಿತಿ ನೀಡಿದ್ದು, ಅವರು ತಕ್ಷಣ ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆಯನ್ನು ಕೈಗೊಂಡರು.ಸ್ಥಳೀಯರ ಮಾಹಿತಿ ಆಧರಿಸಿ ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ರಕ್ಷಣಾ ಪರಿಹಾರ ಕಾರ್ಯಾಚರಣೆ ಕೈಗೊಂಡರು. ಆದರೆ ಅದಾಗಲೇ ತೀವ್ರ ಬೆಂಕಿಯಿಂದಾಗಿ ಬಸ್ ಸಂಪೂರ್ಣವಾಗಿ ಸುಟ್ಟುಹೋಗಿತ್ತು.

ರಾಮಿ ರೆಡ್ಡಿ, ವೇಣುಗೋಪಾಲ್ ರೆಡ್ಡಿ, ಸತ್ಯನಾರಾಯಣ, ಶ್ರೀಲಕ್ಷ್ಮಿ, ನವೀನ್ ಕುಮಾರ್, ಅಖಿಲ್, ಜಶ್ಮಿತಾ, ಅಕಿರಾ, ರಮೇಶ್, ಜಯಸೂರ್ಯ ಮತ್ತು ಸುಬ್ರಮಣಿಯಂ ಅಪಘಾತದಲ್ಲಿ ಬದುಕುಳಿದರು. ಹಿಂದೂಪುರದ ನವೀನ್ ತಮ್ಮ ಕಾರಿನಲ್ಲಿ ಆರು ಗಾಯಾಳುಗಳನ್ನು ಕರ್ನೂಲ್ ಆಸ್ಪತ್ರೆಗೆ ಕರೆದೊಯ್ದರು. ಘಟನೆಯಿಂದಾಗಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಭಾರೀ ಸಂಚಾರ ದಟ್ಟಣೆ ಉಂಟಾಗಿತ್ತು.

ಸಿಎಂ ನಾಯ್ಡು ಆಘಾತ: ಘಟನೆ ಬಗ್ಗೆ ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಆಘಾತ ವ್ಯಕ್ತಪಡಿಸಿದ್ದಾರೆ. ಜೊತೆಗೆ ತಕ್ಷಣ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಉನ್ನತ ಅಧಿಕಾರಿಗಳೊಂದಿಗೆ ಮಾತನಾಡಿ ಪರಿಸ್ಥಿತಿ ಬಗ್ಗೆ ಮಾಹಿತಿ ಪಡೆದು, ಕ್ರಮಕ್ಕೆ ಸೂಚನೆ ನೀಡಿದ್ದಾರೆ. ಗಾಯಾಳುಗಳಿಗೆ ತಕ್ಷಣ ಚಿಕಿತ್ಸೆ ನೀಡಲು ಮತ್ತು ಮೃತರ ಕುಟುಂಬಗಳಿಗೆ ಸಾಧ್ಯವಿರುವ ಎಲ್ಲ ಸಹಕಾರವನ್ನು ನೀಡುವಂತೆ ನಿರ್ದೇಶಿಸಿದ್ದಾರೆ.

ಡಿಕ್ಕಿ ಹೊಡೆದ ಬೈಕ್ ಬಸ್ ಇಂಜಿನ್ ಗೆ ಸಿಲುಕಿ ಬೆಂಕಿ

ವೋಲ್ವೋ ಬಸ್ ಗೆ ಹಿಂದಿನಿಂದ ವೇಗವಾಗಿ ಬಂದ ಬೈಕ್‌ಗೆ ಡಿಕ್ಕಿ ಹೊಡೆದು ಬಸ್ ಅಡಿ ನುಗ್ಗಿ ಇಂಜಿನ್ ಬಳಿ ಸಿಲುಕಿ ನೆಲಕ್ಕೆ ಉಜ್ಜಿದ್ದರಿಂದ ಬೆಂಕಿ ಹೊತ್ತಿಕೊಂಡು ಚಾಲಕನ ಗಮನಕ್ಕೆ ಬರುವಷ್ಟರಲ್ಲಿ ಇಡೀ ಬಸ್ ಅನ್ನೇ ಆವರಿಸಿದ್ದು,ಅದಾಗಲೇ ಬೈಕ್ ಸವಾರ ಮೃತಪಟ್ಟಿದ್ದನು.

ಬೈಕ್ ಡಿಕ್ಕಿ ಹೊಡೆದ ಸ್ಥಳದಲ್ಲೇ ಬಸ್ ನಿಲ್ಲಿಸಿದ್ದರೆ,ಇಷ್ಟೊಂದು ಪ್ರಮಾಣದ ಸಾವು ನೋವು ಸಂಭವಿಸುತ್ತಿರಲಿಲ್ಲ. ಬಸ್ ಚಾಲಕ ಬದಲಿ ಚಾಲಕನನ್ನು ಎಬ್ಬಿಸಿ ಪ್ರಯಾಣಿಕರನ್ನು ಬಸ್‌ನಿಂದ ಕೆಳಗೆ ಇಳಿಸುವ ಪ್ರಯತ್ನ ಮಾಡಿದರೂ ಇಂಜಿನ್ ಗೆ ಬೆಂಕಿ ತಗುಲಿದ್ದರಿಂದ,ಕೆಲವೇ ನಿಮಿಷಗಳಲ್ಲಿ ಇಡೀ ಬಸ್ ಆವರಿಸಿದೆ

ಮುಚ್ಚಿದ್ದ ಕಿಟಕಿಗಳನ್ನು ಒಡೆದು ಪ್ರಯಾಣಿಕರನ್ನು ಹೊರತರಲಾಯಿತು. ಅಷ್ಟರೊಳಗೆ ಹಲವು ಪ್ರಯಾಣಿಕರು ಉಸಿರುಚೆಲ್ಲಿದ್ದಾರೆ,ಪ್ರತ್ಯಕ್ಷದರ್ಶಿಗಳು ಹೇಳುವಂತೆ ಬೆಂಕಿ ಎಷ್ಟು ಬೇಗನೆ ಹರಡಿತೆಂದರೆ, ಹೆಚ್ಚಿನ ಪ್ರಯಾಣಿಕರು ಏನಾಗುತ್ತಿದೆ ಎಂದು ಅರಿತುಕೊಳ್ಳುವ ಮೊದಲೇ ಬೆಂಕಿಯಲ್ಲಿ ಬೆಂದುಹೋಗಿದ್ದಾರೆ,ಕೆಲವರು ಸುಟ್ಟಗಾಯಗಳಿಂದ ಮತ್ತೆ ಕೆಲವರು ಉಸಿರುಗಟ್ಟಿ ಸಾವನ್ನಪ್ಪಿದ್ದಾರೆ.

ಅಗ್ನಿಶಾಮಕ ದಳ ಮತ್ತು ರಕ್ಷಣಾ ತಂಡಗಳು ಸ್ಥಳಕ್ಕೆ ಧಾವಿಸಿ ಬೆಂಕಿಯನ್ನು ನಂದಿಸಲು ಮತ್ತು ಅವಶೇಷಗಳನ್ನು ಹೊರತೆಗೆಯಲು ಹೆಣಗಾಡಿದವು. ಅಧಿಕಾರಿಗಳು ಇನ್ನೂ ಸಾವಿನ ಸಂಖ್ಯೆಯನ್ನು ದೃಢಪಡಿಸಿಲ್ಲ.

16 ಬಾರಿ ಸಂಚಾರ ಉಲ್ಲಂಘನೆ ; ಬೆಂಕಿಗಾಹುತಿಯಾದ ಬಸ್ ಮೇಲೆ 16 ಚಲನ್ ಗಳಿದ್ದು, 23,120 ರೂ ದಂಡ ಬಾಕಿ ಇದೆ. ಈ ಬಸ್ ಜನವರಿ 27, 2024 ರಿಂದ ಅಕ್ಟೋಬರ್ 9, 2025 ರವರೆಗೆ 16 ಬಾರಿ ಸಂಚಾರ ನಿಯಮಗಳನ್ನು ಉಲ್ಲಂಘಿಸಿದೆ. ಪ್ರವೇಶ ನಿಷೇಧಿತ ವಲಯವನ್ನು ಒಂಬತ್ತು ಬಾರಿ ಪ್ರವೇಶಿಸಿದ್ದಕ್ಕಾಗಿ ದಂಡ ವಿಧಿಸಲಾಗಿದೆ. ಜೊತೆಗೆ ಅತಿ ವೇಗ ಮತ್ತು ಅಪಾಯಕಾರಿ ಚಾಲನಾ ಉಲ್ಲಂಘನೆಗಾಗಿ ಚಲನ್‌ಗಳನ್ನು ಸಹ ನೀಡಲಾಗಿತ್ತು

ಈ ಬಸ್ ಡಿಡಿ01 ಎನ್ 9490 ಸಂಖ್ಯೆಯೊಂದಿಗೆ ನೋಂದಾಯಿಸಲಾಗಿದೆ ಎಂದು ಆಂಧ್ರಪ್ರದೇಶ ಸಾರಿಗೆ ಇಲಾಖೆ ಬಹಿರಂಗಪಡಿಸಿದೆ. ಜೊತೆಗೆ ಬಸ್ ಫಿಟ್ ಆಗಿತ್ತು. ಆದರೆ ಬೈಕ್‌ಗೆ ಜೊತೆಗಿನ ರಭಸದ ಡಿಕ್ಕಿಯಿಂದಾಗಿ ಬಸ್‌ನಲ್ಲಿ ಬೆಂಕಿ ಕಾಣಿಸಿಕೊಂಡಿದೆ.

ಒಂದೇ ಕುಟುಂಬದ ನಾಲ್ವರು ಸಾವು :ಬಸ್ ಸುಟ್ಟು ಕರಕಲಾದ ದುರಂತದಲ್ಲಿ ಒಂದೇ ಕುಟುಂಬದ ನಾಲ್ವರು ಸಜೀವ ದಹನವಾಗಿದ್ದಾರೆ. ನೆಲ್ಲೂರ್ ಜಿಲ್ಲೆಯ ಗೊಲ್ಲಾವರಿಪಲ್ಲಿಯ ಗೊಲ್ಲಾ ರಮೇಶ್ (35), ಅನುಷಾ (30), ಮನ್ವಿತಾ (10) ಮತ್ತು ಮನಿಶ್ (12) ಮೃತ ಕುಟುಂಬಸ್ಥರು .

ಬಸ್ಸಿನಲ್ಲಿದ್ದ ಪ್ರಯಾಣಿಕರು:ಅಶ್ವಿನ್ ರೆಡ್ಡಿ (36), ಜಿ. ಧಾತ್ರಿ (27), ಕೀರ್ತಿ (30), ಪಂಕಜ್ (28), ಯುವನ್ ಶಂಕರ್ ರಾಜು (22), ತರುಣ್ (27), ಆಕಾಶ್ (31), ಗಿರಿರಾವ್ (48), ಬುನಾ ಸಾಯಿ (33), ಗಣೇಶ್ (30), ಜಯಂತ್ ಪುಷ್ವಾಹ (27), ಪಿಲ್ವಾಮಿನ್ ಬೇಬಿ (64), ಕಿಶೋರ್ ಕುಮಾರ್ (41), ರಮೇಶ್ (30), ಅನುಷಾ (22), ಮೊಹಮ್ಮದ್ (51), ದೀಪಕ್ ಕುಮಾರ್ (24), ಆಂದೋಜ್ ನವೀನ್ ಕುಮಾರ್ (26), ಪ್ರಶಾಂತ್ (32), ಎಂ. ಸತ್ಯನಾರಾಯಣ (28), ಮೇಘನಾಥ್ (25), ವೇಣು ಗುಂಡ (33), ಚರಿತ್ (21), ಚಂದನಾ ಮಂಗಾ (23), ಸಂಧ್ಯಾರಾಣಿ ಮಂಗಾ (43), ಗ್ಲೋರಿಯಾ ಎಲ್ಲೆಸಾ ಶ್ಯಾಮ್ (28), ಸೂರ್ಯ (24), ಹರಿಕಾ (30), ಶ್ರೀಹರ್ಷ (24), ಶಿವ (24), ಶ್ರೀನಿವಾಸ ರೆಡ್ಡಿ (40), ಸುಬ್ರಹ್ಮಣ್ಯಂ (26), ಕೆ.ಅಶೋಕ್ (27), ಎಂ.ಜಿ. ರಾಮರೆಡ್ಡಿ (50), ಉಮಾಪತಿ (32), ಅಮೃತ್ ಕುಮಾರ್ (18), ವೇಣುಗೋಪಾಲ್ ರೆಡ್ಡಿ (24)

20 ಶವಗಳು ಹೊರಕ್ಕೆ

ಬಸ್ಸಿನಲ್ಲಿ ಒಟ್ಟು 43 ಜನರಿದ್ದರು. ಈ ಪೈಕಿ 41 ಪ್ರಯಾಣಿಕರು ಮತ್ತು ಇಬ್ಬರು ಚಾಲಕರು. 41 ಪ್ರಯಾಣಿಕರಲ್ಲಿ 39 ವಯಸ್ಕರು ಮತ್ತು ಇಬ್ಬರು ಚಿಕ್ಕ ಮಕ್ಕಳು. ಈ ಪೈಕಿ 10 ಮಹಿಳೆಯರಿದ್ದರು. ಇಲ್ಲಿಯವರೆಗೆ, ವಿಧಿವಿಜ್ಞಾನ ತಂಡವು ಬಸ್ಸಿನಿಂದ 20 ಶವಗಳನ್ನು ಹೊರತೆಗೆದಿದ್ದು, ಅವರನ್ನು ಗುರುತಿಸುವ ಪ್ರಕ್ರಿಯೆ ಮುಂದುವರೆದಿದೆ.

ಸುರಕ್ಷಿತವಾಗಿರುವ 19 ಜನರನ್ನು ಗುರುತಿಸಲಾಗಿದೆ ಮತ್ತು ಅವರಲ್ಲಿ ಹಲವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಡಿಐಜಿ ಕೋಯ ಪ್ರವೀಣ್ ಅವರು ಮಾಹಿತಿ ನೀಡಿದ್ದಾರೆ

2 ಲಕ್ಷ ರೂ. ಪರಿಹಾರ

ಕರ್ನೂಲ್‌ನಲ್ಲಿ ಖಾಸಗಿ ಬಸ್ ಬೆಂಕಿ ಹೊತ್ತಿಕೊಂಡು ಮೃತಪಟ್ಟ 20 ಮಂದಿ ಕುಟುಂಬ ಸದಸ್ಯರಿಗೆ ಪ್ರಧಾನಿ ನರೇಂದ್ರ ಮೋದಿ ತಲಾ ಎರಡು ಲಕ್ಷ ರೂ. ಪರಿಹಾರ ಪ್ರಕಟಿಸಿದ್ದಾರೆ.

ಈ ಕುರಿತು ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಪ್ರಧಾನಿ ಘಟನೆಯ ಬಗ್ಗೆ ತೀವ್ರ ಸಂತಾಪ ವ್ಯಕ್ತಪಡಿಸಿ, ಗಾಯಾಳುಗಳು ಶೀಘ್ರ ಗುಣಮುಖರಾಗಲಿ ಎಂದು ಪ್ರಾರ್ಥಿಸಿದ್ದಾರೆ.

ಗಣ್ಯರ ಕಂಬನಿ

ಆಂಧ್ರಪ್ರದೇಶದ ಕರ್ನೂಲ್‌ನಲ್ಲಿ ಬಸ್ ಅಗ್ನಿದುರಂತದಲ್ಲಿ ಮೃತಪಟ್ಟವರಿಗೆ ಪ್ರಧಾನಿ ನರೇಂದ್ರ ಮೋದಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಹಲವು ಗಣ್ಯರು ದುಃಖ ವ್ಯಕ್ತಪಡಿಸಿದ್ದಾರೆ.

ನರೇಂದ್ರ ಮೋದಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಸೇರಿದಂತೆ ಹಲವರು ಘಟನೆಯ ಬಗ್ಗೆ ಆಘಾತ ವ್ಯಕ್ತಪಡಿಸಿ, ಮೃತಪಟ್ಟವರ ಕುಟುಂಬಕ್ಕೆ ಸಾಂತ್ವಾನ ಹೇಳಿ ಗಾಯಗೊಂಡವರು ಶೀಘ್ರ ಗುಣಮುಖರಾಗಲಿ ಎಂದು ಪ್ರಾರ್ಥಿಸಿದ್ದಾರೆ.

24 ಲೀಡ್ ಬಾಕ್ಸ್ ಬೆಂಗಳೂರಿನ ಯುವತಿ ಸಜೀವ ದಹನ ; ಆಂಧ್ರಪ್ರದೇಶದ ಕರ್ನೂಲ್ ನಲ್ಲಿ ಸಂಭವಿಸಿದ ಖಾಸಗಿ ಬಸ್ ಅಗ್ನಿ ದುರಂತದಲ್ಲಿ ಬೆಂಗಳೂರಿನ 22 ವರ್ಷದ ಯುವತಿ ಸಜೀವ ದಹನವಾಗಿರುವ ಕುರಿತು ಮಾಹಿತಿ ಲಭ್ಯವಾಗಿದೆ.

ಯಾದ್ರಾದಿಯ ನಿವಾಸಿ 22 ವರ್ಷದ ಅನುಷಾ ಬೆಂಗಳೂರಿನಲ್ಲಿ ಸಾಫ್ಟ್ ವೇರ್ ಎಂಜಿನಿಯರ್ ಆಗಿ ಕೆಲಸ ಮಾಡುತ್ತಿದ್ದರು. ದೀಪಾವಳಿ ಹಬ್ಬಕ್ಕೆ ಊರಿಗೆ ಹೋಗಿ ನಿನ್ನೆ ರಾತ್ರಿ ಬಸ್ ಹತ್ತಿದ್ದರು.

ಮುಂಜಾನೆ ಕರ್ನೂಲ್ ಹೊರವಲಯದ ಉಳಿಂದಪಾಡು ಎಂಬಲ್ಲಿ ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡೆದ ಪರಿಣಾಮ ಬಸ್ ಬೆಂಕಿಗೆ ಆಹುತಿಯಾಗಿದ್ದು, ಮೃತಪಟ್ಟವರ ಸಂಖ್ಯೆ 20ಕ್ಕೆ ಏರಿಕೆಯಾಗಿದೆ ಎಂದು ವರದಿಯಾಗಿದೆ.

ಘಟನೆಯಲ್ಲಿ ಮೃತಪಟ್ಟ 11 ಜನರ ಗುರುತು ಪತ್ತೆ ಹಚ್ಚಲಾಗಿದೆ. ಎಂದು ಜಿಲ್ಲಾಧಿಕಾರಿ ಡಾ. ಎ. ಸಿರಿ ದೃಢಪಡಿಸಿದ್ದಾರೆ, ಇಬ್ಬರೂ ಚಾಲಕರು ಬಸ್ಸಿಂದ ಸುರಕ್ಷಿತವಾಗಿ ಹೊರಬರುವಲ್ಲಿ ಯಶಸ್ವಿಯಾದರು ಮತ್ತು ಎಲ್ಲಾ 11 ಶವಗಳನ್ನು ಗುರುತಿಸಲಾಗಿದೆ.

ಅಪಘಾತ ಸಂಭವಿಸಿದಾಗ ವಿ ಕಾವೇರಿ ಟ್ರಾವೆಲ್ಸ್ ಬಸ್ ಸುಮಾರು 40 ಪ್ರಯಾಣಿಕರು ಮತ್ತು ಇಬ್ಬರು ಚಾಲಕರೊಂದಿಗೆ ಹೈದರಾಬಾದ್ನಿಂದ ಬೆಂಗಳೂರಿಗೆ ಪ್ರಯಾಣಿಸುತ್ತಿತ್ತು. ಡಿಕ್ಕಿಯ ಪರಿಣಾಮವಾಗಿ ಬೆಂಕಿ ಕಾಣಿಸಿಕೊಂಡಿದ್ದು, ಹಲವರು ಒಳಗೆ ಸಿಲುಕಿಕೊಂಡಿದ್ದಾರೆ ಎಂದು ವರದಿಯಾಗಿದೆ. ಹೆಚ್ಚಿನ ಪ್ರಯಾಣಿಕರು 35 ರಿಂದ 40 ವರ್ಷ ವಯಸ್ಸಿನವರಾಗಿದ್ದರು ಮತ್ತು ಹಲವರು ತುರ್ತು ಕಿಟಕಿಗಳನ್ನು ಮುರಿದು ತಪ್ಪಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ.

**ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ**

**9743497111 9743496111**

# ಶಾರ್ಟ್ ಸರ್ಕ್ಯೂಟ್‌ಗೆ ಸುಟ್ಟ ಮನೆಗೆ ಶರಣಗೌಡ ಬಯ್ಯಾಪೂರ ಭೇಟಿ, ನೆರವು

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಅ.24**–ತಾಲೂಕಿನ ಗೊರೇಬಾಳ ಗ್ರಾಪಂ ವ್ಯಾಪ್ತಿಯಲ್ಲಿ ಬರುವ ಹಾಲಭಾವಿ ಗ್ರಾಮದಲ್ಲಿ ಇತ್ತೀಚೆಗೆ ವಿದ್ಯುತ್ ಶಾರ್ಟ್ ಸರ್ಕ್ಯೂಟ್ ನಿಂದ ಮನೆಯೊಂದಕ್ಕೆ ಬೆಂಕಿ ಬಿದ್ದು ಅಪಾರ ಪ್ರಮಾಣದ ವಸ್ತುಗಳು ಸುಟ್ಟು ಕರಕಲಾಗಿದ್ದವು.

ಸ್ಥಳಕ್ಕೆ ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ್ ಬಯ್ಯಾಪೂರ ಭೇಟಿ ನೀಡಿ ವೈಯಕ್ತಿಕವಾಗಿ ಸಂತ್ರಸ್ಥ ಹನುಮವ್ವ ಮೂಲಿಮನಿಯವರಿಗೆ 20 ಸಾವಿರ ರೂಪಾಯಿ ನೆರವು ನೀಡಿದ್ದಲ್ಲದೇ, ಸರಕಾರದಿಂದ ಬರುವ ಸವಲತ್ತುಗಳನ್ನು ತ್ವರಿತವಾಗಿ ನೀಡುವಂತೆ ತಹಸೀಲ್ದಾರ್ ಸತ್ಯಮ್ಮರಿಗೆ ಸೂಚನೆ ನೀಡಿದರು.

ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಪಾಮಯ್ಯ ಮುರಾರಿ, ನಗರಯೋಜನಾ ಪ್ರಾಧಿಕಾರದ ಅಧ್ಯಕ್ಷ ಭೂಪನ



’ಗೌಡ ಕರಡಕಲ್, ಮುಖಂಡರಾದ ಬಸವರಾಜಗೌಡ ಗಣೇಕಲ್, ಗುಂಡಪ್ಪ ನಾಯಕ, ಡಿಜಿ ಗುರಿಕಾರ, ಜಗದೀಶ ಪಾಟೀಲ್, ಶಶಿಧರ ಪಾಟೀಲ್, ಕೃಷ್ಣಾ ಪಾಟೀಲ್, ಹನುಮೇಶ ನಾಯಕ, ಚಂದ್ರಶೇಖರ ಗೊರೆಬಾಳ, ಚೆನ್ನಾರೆಡ್ಡಿ ಬಿರಾದಾರ ಸೇರಿದಂತೆ ಇದ್ದರು.

# ನೂತನ ಕೆ.ಪಿ.ಎಸ್.ವಿ.ಎಸ್. ಡಯಾಗ್ನಾಸ್ಟಿಕ್ಸ್ ಕೇಂದ್ರದ ಲೋಕಾರ್ಪಣೆ




**ಯುವ ಮಾರ್ಗ ಸುದ್ದಿ**

**ಮಾನ್ವಿ,ಅ.24**–ಪಟ್ಟಣದ ಕೆ.ಪಿ.ಎಸ್.ವಿ.ಎಸ್. ಆಯುರ್ವೇದಿಕ್ ಕಾಲೇಜು ಮತ್ತು ಆಸ್ಪತ್ರೆಯ ಅವರಣದಲ್ಲಿ ನೂತನ ಕೆ.ಪಿ.ಎಸ್.ವಿ.ಎಸ್. ಡಯಾಗ್ನಾಸ್ಟಿಕ್ಸ್ ಕೇಂದ್ರವನ್ನು ನೀಲಗಲ್ ಬೃಹ್ಮಠದ ಶ್ರೀ ಡಾ.ಪಂಚಾಕ್ಷರಿ ಶಿವಾಚಾರ್ಯ ಮಹಾಸ್ವಾಮಿಗಳು ಉದ್ಘಾಟಿಸಿ ಮಾತನಾಡಿ, ಕಾಯಿಲೆಯನ್ನು ಪತ್ತೆಹಚ್ಚಿದಾಗ ಮಾತ್ರ ಸೂಕ್ತವಾದ ಚಿಕಿತ್ಸೆಯನ್ನು ನೀಡುವುದಕ್ಕೆ ವೈದ್ಯರಿಗೆ ಸಾಧ್ಯವಾಗಲಿದೆ ಈ ನಿಟ್ಟಿನಲ್ಲಿ ಮಹಾನಗರಗಳಲ್ಲಿ ದೊರೆಯುವ ರೋಗಪತ್ತೆ ಹಚ್ಚುವ ಪರೀಕ್ಷೆಗಳು ಸುಲಾಭವಾಗಿ ತಾಲೂಕು ಮಟ್ಟದಲ್ಲಿ ಸಾರ್ವಜನಿಕರಿಗೆ ಲಭ್ಯವಾಗಲಿ ಹಾಗೂ ವೈದ್ಯರಿಗೆ ಚಿಕಿತ್ಸೆ ನೀಡುವುದಕ್ಕೆ ಅನುಕುಲವಾಗಲಿ ಎನ್ನುವ ಉದ್ದೇಶದಿಂದ ಕಲ್ಮಠದ ಶ್ರೀ ವೀರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ನೂತನ ಕೆ.ಪಿ.ಎಸ್.ವಿ.ಎಸ್. ಡಯಾಗ್ನಾಸ್ಟಿಕ್ಸ್ ಕೇಂದ್ರವನ್ನು ಪ್ರಾರಂಭಿಸಿದ್ದಾರೆ ಸಾರ್ವಜನಿಕರು ಡಯಾಗ್ನಾಸ್ಟಿಕ್ಸ್ ಕೇಂದ್ರವನ್ನು ಉತ್ತಮವಾಗಿ ಸದುಪಯೋಗ ಪಡಿಸಿಕೊಳ್ಳುವಂತೆ ತಿಳಿಸಿದರು.

ಕಾರ್ಯಕ್ರಮದ ಸಾನಿಧ್ಯವನ್ನು ಕಲ್ಮಠದ ಶ್ರೀ ವೀರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸಿದರು ನೀಲಗಲ್ ಮಠದ ಶ್ರೀಅಭಿನವ ರೇಣುಕಾ ಶಾಂತಮಲ್ಲ ಮಹಾಸ್ವಾಮಿಗಳು, ಚೀಕಲಪರ್ವಿ ಮಠದ ಸದಾಶಿವ ಮಹಾಸ್ವಾಮಿಗಳು ಹಾಗೂ ಕೆ.ಪಿ.ಎಸ್.ವಿ.ಎಸ್. ಆಯುರ್ವೇದಿಕ್ ಕಾಲೇಜಿನ ಪ್ರಾಚಾರ್ಯರಾದ ಡಾ.ಜೀವನೇಶ್ವರಯ್ಯ ಮುಖ್ಯ ಆತಿಥಿಗಳಾಗಿ ಡಾ.ರೋಹಿಣಿ ಮಾನ್ವಿಕರ್ , ಆಶ್ವನಿ ಆಸ್ಪತ್ರೆಯ ತಜ್ಞ ವೈದ್ಯರಾದ ಡಾ.ಆಶ್ವಿನಿ ಕುಮಾರ, ಡಾ,ರಮ್ಯವೀರವಲ್ಲಿ ಸೇರಿದಂತೆ ತಾಲೂಕಿನ ವಿವಿಧ ಆಸ್ಪತ್ರೆಗಳ ವೈದ್ಯರು ಭಾಗವಹಿಸಿದರು.

# ಓಂ ಸಾಯಿ ಧ್ಯಾನ ಮಂದಿರದಲ್ಲಿ ವೀರರಾಣಿ ಕಿತ್ತೂರು ಚೆನ್ನಮ್ಮ ಜಯಂತಿ ಆಚರಣೆ



**ಯುವ ಮಾರ್ಗ ಸುದ್ದಿ**

**ರಾಯಚೂರು,ಅ.24**–ನಗರದ ಸಾರ್ವಜನಿಕ ಉದ್ಯಾನವನ ಸಮೀಪದ ಓಂ ಸಾಯಿ ಧ್ಯಾನ ಮಂದಿರದಲ್ಲಿ ಗುರುವಾರದಂದು ವೀರರಾಣಿ ಕಿತ್ತೂರು ಚೆನ್ನಮ್ಮ ಜಯಂತಿ ಕಾರ್ಯಕ್ರಮವು ಯಶಸ್ವಿಯಾಗಿ ಜರುಗಿತು.

ಕಿತ್ತೂರು ರಾಣಿ ಚೆನ್ನಮ್ಮನವರ ಭಾವಚಿತ್ರಕ್ಕೆ ಮಾರ್ಪಣೆಯನ್ನು ಮಾಡಿದ ನಂತರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹ ಕಾರ್ಯದರ್ಶಿಗಳಾದ ಡಾ. ಬಿರಾದಾರ ಅವರು ಮಾತನಾಡಿ, ರಾಣಿ ಚೆನ್ನಮ್ಮ ಅವರ ಧೈರ್ಯ, ಸಾಹಸ ನಾಡಿನ ಪ್ರತಿಯೊಬ್ಬ ಮಹಿಳೆಯರಿಗೂ ಆದರ್ಶ ಮತ್ತು ಸ್ಫೂರ್ತಿಯಾಗಿದೆ ಎಂದು ಹೇಳಿದರು. ರಾಣಿ ಚೆನ್ನಮ್ಮ ಬಾಲ್ಯದಿಂದಲೇ ಕುದುರೆ ಸವಾರಿ, ಕತ್ತಿ ವರಸೆ ಸೇರಿದಂತೆ ಎಲ್ಲಾ ಯುದ್ಧ ಕಲೆಗಳನ್ನು ಅಭ್ಯಾಸ ಮಾಡಿದ್ದರು. ಬ್ರಿಟಿಷರ ವಿರುದ್ಧ ಹೋರಾಡಿದ ಮೊದಲ ಮಹಿಳೆ ರಾಣಿ ಚೆನ್ನಮ್ಮ ಅವರ ಜೀವನ ಮತ್ತು ಹೋರಾಟ ಪ್ರತಿಯೊಬ್ಬ ಮಹಿಳೆಗೂ ಆದರ್ಶಪ್ರಾಯವಾಗಿದೆ. ವಿದ್ಯಾರ್ಥಿಗಳು ಇಂತಹವರ ಜೀವನ ಚರಿತ್ರೆಯನ್ನು ಓದಬೇಕು. ಬ್ರಿಟಿಷರು ಕಪ್ಪ ಕಾಣಿಕೆಯನ್ನು ಕೇಳಿದಾಗ ಅದನ್ನು ಕೊಡದೆ, ಅವರ ವಿರುದ್ಧ ಯುದ್ಧವನ್ನು ಸಾರಿ ಮೊದಲನೇ ಯುದ್ಧದಲ್ಲಿ ದಿಟ್ಟ ಮಹಿಳೆ ವೀರ ರಾಣಿ ಕಿತ್ತೂರು ಚೆನ್ನಮ್ಮ ವಿಜಯ ಸಾಧಿಸಿದ್ದರು ಎಂದು ಡಾ. ಬಿರಾದಾರ ವಿವರಿಸಿದರು.

ನಂತರ ಮಾತನಾಡಿದ ಧರ್ಮಾಧಿಕಾರಿ ಸಾಯಿ ಕಿರಣ ಅಧೊನಿ ಯವರು, ವೀರ ರಾಣಿ ಕಿತ್ತೂರು ಚೆನ್ನಮ್ಮನ ಜೀವನ ಮತ್ತು ಸಾಧನೆ ಕುರಿತು ಡಾ. ಬಿರಾದಾರ ಅವರು ಅರ್ಥಪೂರ್ಣವಾದ ಉಪನ್ಯಾಸ ನೀಡಿದ್ದಾರೆ ಎಂದರು. ಅಲ್ಲದೆ, ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿರುವ ನಮ್ಮ ರಾಯಚೂರು ನಗರದ ನಿರ್ಮಲಾ ಬೆಣ್ಣಿ ಅವರು ಇತ್ತೀಚೆಗೆ ಪ್ರಯಾಣದ ಸಂದರ್ಭದಲ್ಲಿ ಬೆಂಕಿ ಕಾಣಿಸಿಕೊಂಡಾಗ ಬಹಳ ಎಚ್ಚರಿಕೆಯಿಂದ ಮತ್ತು ಧೈರ್ಯದಿಂದ ಡ್ರೈವರ್‌ಗೆ ಮಾಹಿತಿ ನೀಡಿ, ಬಸ್ಸನ್ನು ನಿಲುಗಡೆ ಮಾಡಿಸಿ, ಎಲ್ಲಾ ಪ್ರಯಾಣಿಕರನ್ನು ಸುರಕ್ಷಿತವಾಗಿ ಇಳಿಸಿದ ಕೆಲವೇ ಕ್ಷಣಗಳಲ್ಲಿ ಇಡೀ ಬಸ್ಸು ಬೆಂಕಿಗೆ ಆಹುತಿಯಾಗಿತ್ತು. ಅವರ ಸಮಯಪ್ರಜ್ಞೆ ಮತ್ತು ಧೈರ್ಯದಿಂದ ನೂರಾರು ಪ್ರಯಾಣಿಕರ ಪ್ರಾಣಾಪಾಯದಿಂದ ಪಾರಾಯಿತು. ಅವರ ಕಾರ್ಯಕ್ಕೆ ಅಭಿನಂದನೆಗಳು ಎಂದು ತಿಳಿಸಿದರು.

**ನಿರ್ಮಲಾ ಬೆಣ್ಣಿ ಅವರಿಗೆ ಸನ್ಮಾನ:** ಇದೇ ಸಂದರ್ಭದಲ್ಲಿ ಇತ್ತೀಚೆಗೆ ರಾಯಚೂರಿನಿಂದ ಬೆಂಗಳೂರಿಗೆ ಬಸ್ಸಿನಲ್ಲಿ ಪ್ರಯಾಣಿಸುತ್ತಿದ್ದಾಗ ಅನಂತಪುರ ಬಳಿ ಬಸ್ಸಿನಲ್ಲಿ ಬೆಂಕಿಯ ವಾಸನೆ ಬಂದ ಕೂಡಲೇ ಡ್ರೈವರ್ ಜೊತೆ ದಿಟ್ಟವಾಗಿ ಮಾತನಾಡಿ ಬಸ್ಸನ್ನು ನಿಲುಗಡೆ ಮಾಡಿಸಿ, ಎಲ್ಲ ಪ್ರಯಾಣಿಕರನ್ನು ಸುರಕ್ಷಿತವಾಗಿ ಕೆಳಗಿಳಿಸಿದ ಅಖಿಲ ಭಾರತ ವೀರಶೈವ ಮಹಿಳಾ ಮಹಾಸಭಾ ಅಧ್ಯಕ್ಷರಾದ ನಿರ್ಮಲಾ ಬೆಣ್ಣಿ ಅವರ ಸಮಯಪ್ರಜ್ಞೆ ಮತ್ತು ಧೈರ್ಯ ಸಾಹಸವನ್ನು ಗುರುತಿಸಿ ಓಂ ಸಾಯಿ ಮಂದಿರದ ಗುರೂಜಿ/ ಧರ್ಮಾಧಿಕಾರಿಗಳಾದ ಸಾಯಿ ಕಿರಣ ಅಧೊನಿ ಯವರು ಸನ್ಮಾನಿಸಿ ಗೌರವಿಸಿದರು.

ಶುಭ ಪಾಟೀಲ್ ಅವರು ಸಾಯಿಬಾಬಾ ಅವರ ಜೀವನ ಚರಿತ್ರೆಯ ಕೆಲ ಭಾಗಗಳನ್ನು ಓದಿದರು. ಗಜ ಹುಲಿಗೆಪ್ಪ ಸುವಾಸಿನಿ ಅವರು ಗೀತಾ ಗಾಯನದ ಮೂಲಕ ಭಕ್ತಿ ಸೇವೆಯನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಕವಿತಾ ಎಸ್.ಕೆ.ಎ., ಸುಲೋಚನ ಆಲ್ಕೂರ್, ಜ್ಯೋತಿ ಪ್ರತಿಭೂನಾಳ, ವಿದ್ಯಾ, ಸುರೇಖಾ, ಮಹಾದೇವಿ ಹಾಗೂ ಸಾಯಿ ಮಂದಿರದ ಸದ್ಭಕ್ತರು ಉಪಸ್ಥಿತರಿದ್ದರು.

# ನ.17ರಿಂದ ಐತಿಹಾಸಿಕ ಬಸವನಗುಡಿಯ ಕಡಲೆಕಾಯಿ ಪರೀಕ್ಷೆ



ಬೆಂಗಳೂರು,ಅ.24-ಐತಿಹಾಸಿಕ ಬಸವನಗುಡಿಯ ಕಡಲೆಕಾಯಿ ಪರೀಷೆ ನ.17ರಿಂದ ಆರಂಭವಾಲಿದ್ದು, ಈ ಬಾರಿ ಐದು ದಿನಗಳ ಕಾಲ ಅದ್ಧೂರಿಯಾಗಿ ಪರೀಷೆ ನಡೆಯಲಿದೆ ಎಂದು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ.

ಕಡಲೆಕಾಯಿ ಪರಿಷೆ 2025 ರ ಪೂರ್ವಾಭಾವಿ ಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಮೊದಲ ಬಾರಿಗೆ 2 ದಿನಗಳ ಪರೀಷೆ 5 ದಿನಗಳವರೆಗೆ ವಿಜೃಂಭಣೆಯಿಂದ ನಡೆಸಲು ತೀರ್ಮಾನಿಸಲಾಗಿದೆ. ಕಳೆದ ವರ್ಷ ಸುಮಾರು 5 ಲಕ್ಷ ಭಕ್ತಾದಿಗಳು ಭಾಗವಹಿಸಿದ್ದು, ಯಶಸ್ವಿಯಾಗಿ ನಡೆದಿತ್ತು. ಜೊತೆಗೆ ಪ್ಲಾಸ್ಟಿಕ್ ಮುಕ್ತ ಕಡಲೆಕಾಯಿ ಪರೀಷೆ ಎಂಬ ಹೆಗ್ಗಳಿಕೆಗೂ ಪಾತ್ರವಾಗಿತ್ತು ಎಂದರು.

ಪ್ರತಿ ವರ್ಷದಂತೆ ಕಡೇ ಕಾರ್ತಿಕ ಮಾಸದಲ್ಲಿ ಬಸವನಗುಡಿಯ ಶ್ರೀ ಬಸವಣ್ಣ ದೇವಾಲಯದಲ್ಲಿ ನ.17ರಂದು ಬೆಳಗ್ಗೆ 10 ಗಂಟೆಗೆ ಆರಂಭವಾಗುವ ಕಡಲೆಕಾಯಿ ಪರೀಷೆ ಉದ್ಘಾಟನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಆಹ್ವಾನಿಸಲಾಗಿದೆ ಎಂದು ತಿಳಿಸಿದರು.

ಉದ್ಘಾಟನೆಯನ್ನು 21 ಬಸವಣ್ಣಗಳನ್ನು ದೇವಸ್ಥಾನಕ್ಕೆ ಆಹ್ವಾನಿಸಿ ವಿಶೇಷ ಪೂಜೆ ಸಲ್ಲಿಸುವ ಮೂಲಕ ಚಾಲನೆ ನೀಡಲಾಗುವುದು. ವಿಜೃಂಭಣೆಯ ದೀಪಾಲಂಕಾರ ವ್ಯವಸ್ಥೆ ಬುಲ್ ಟೆಂಪಲ್ ರಸ್ತೆ, ಗಾಂಧಿ ಬಜಾರ್ ಮತ್ತು ಎನ್. ಆರ್ ರಸ್ತೆಗಳಿಗೂ ಸೇರಿ ದೀಪಾಂಲಕಾರ ವಿಸ್ತರಿಸಲು ತೀರ್ಮಾನಿಸಲಾಗಿದೆ ಎಂದರು.

ಎನ್‌ಜಿಓಗಳ ಸಹಕಾರದೊಂದಿಗೆ ಪ್ಲಾಸ್ಟಿಕ್ ಕವರ್ ಗಳನ್ನು ಬಳಸದಂತೆ ಬಟ್ಟೆ ಬ್ಯಾಗ್ ಗಳನ್ನು ಬಳಸಲು ಅಂಗಡಿಯವರಿಗೆ ಮತ್ತು ಸಾರ್ವಜನಿಕರಿಗೆ ಅರಿವು ಮೂಡಿಸಲು ಪರಿಷೆಗೆ ಬನ್ನಿ ಕೈ ಚೀಲ ತನ್ನಿ ಎಂದು ಘೋಷಣೆ ಹಾಗೂ ಪ್ಲಾಸ್ಟಿಕ್ ಸಂಪೂರ್ಣ ನಿಷೇದಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು.

**ಸುಂಕ ವಸೂಲಾತಿ ರದ್ದು ಮುಂದುವರಿಕೆ**-ಬುಲ್‌ಟೆಂಪಲ್ ರಸ್ತೆಯಲ್ಲಿ ಬೀದಿಬದಿ ವ್ಯಾಪಾರಿಗಳಿಂದ ಸುಂಕ ವಸೂಲಾತಿಗೆ ಪ್ರತಿ ವರ್ಷ ಟೆಂಡರ್ ಮಾಡಲಾಗುತ್ತಿದ್ದು, ಟೆಂಡರ್ ದಾರರು ಅಂಗಡಿಯವರಿಂದ ಬಲವಂತವಾಗಿ ಹೆಚ್ಚು ಸುಂಕ ವಸೂಲಿ ಮಾಡುತ್ತಿರುವುದಾಗಿ ದೂರುಗಳು ಬಂದ ಹಿನ್ನೆಲೆಯಲ್ಲಿ ಸುಂಕ ವಸೂಲಾತಿ ಟೆಂಡರ್ ಅನ್ನು ಕೈಬಿಡಲು ಹಾಗೂ ವ್ಯಾಪಾರಸ್ಥರಿಂದ ಸುಂಕವನ್ನು ಕಳೆದ ವರ್ಷದಂತೆ ಈ ವರ್ಷವೂ ವಸೂಲಿ ಮಾಡದಂತೆ ನಿರ್ಧರಿಸಲಾಗಿದೆ ಎಂದು ತಿಳಿಸಿದರು.

ಕಡಲೆಕಾಯಿ ಪರಿಷೆ ದಿನಗಳಂದು ಆರೋಗ್ಯ ಸ್ವಚ್ಛತೆ ನೈರ್ಮಲ್ಯಕ್ಕೆ ಒತ್ತು ಮತ್ತು ನೂಕು ನುಗ್ಗಲು ಉಂಟಾಗದಂತೆ ತಡೆಯಲು ಪೊಲೀಸ್ ಇಲಾಖೆಯ ಸಹಕಾರದೊಂದಿಗೆ ಅಗತ್ಯ ವ್ಯವಸ್ಥೆ ಮಾಡಲಾಗಿದೆ. ನಿರಂತರ ವಿದ್ಯುತ್, ಕುಡಿಯುವ ನೀರು, ಸಾರ್ವಜನಿಕ ಶೌಚಾಲಯದ ವ್ಯವಸ್ಥೆ ಮಾಡಲಾಗುವುದು ಎಂದರು.

ಬೀದಿದೀಪಗಳ ಅಳವಡಿಕೆ ಮತ್ತು ದುರಸ್ಥಿ, ಸುರಕ್ಷತೆಯ ದೃಷ್ಟಿಯಿಂದ ಹೆಚ್ಚಿನ ಸಿ.ಸಿ.ಟಿ.ವಿಗಳನ್ನು ಪ್ರಮುಖ ಸ್ಥಳಗಳಲ್ಲಿ ಅಳವಡಿಕೆ, ಅಗ್ನಿ ಶಾಮಕ ವಾಹನ ನಿಯೋಜನೆ ಸೇರಿದಂತೆ ತುರ್ತು ಚಿಕಿತ್ಸೆ ವಾಹನದ ವ್ಯವಸ್ಥೆ, ಮಾರ್ಷಲ್‌ಗಳನ್ನಿ ನಿಯೋಜಿಸಲಾಗುವುದು ಎಂದು ತಿಳಿಸಿದರು. ಸಭೆಯಲ್ಲಿ ಶಾಸಕರಾದ ರವಿಸುಬ್ರಹ್ಮಣ್ಯ, ಉದಯ ಗರುಡಾಚಾರ್, ರಾಜ್ಯ ಧಾರ್ಮಿಕ ಪರಿಷತ್ ಸದಸ್ಯರಾದ ಕೆ.ಎಂ .ನಾಗರಾಜ್, ದ್ವಾರಕಾನಾಥ್, ದಕ್ಷಿಣ ಪಾಲಿಕೆಯ ಹಿರಿಯ ಅಧಿಕಾರಿ ದಿಗ್ವಿಜಯ ಬೋಡ್ಸೆ ಮತ್ತಿತರರು ಉಪಸ್ಥಿತರಿದ್ದರು.

# ಐಪಿಎಸ್ ಅಧಿಕಾರಿಯ ಮೇಲೆ ಎಸ್‌ಐ ಪತ್ನಿ ದೂರು

**ರಾಯ್‌ಪುರ, ಅ.24**- ಛತ್ತಿಸ್‌ಗಢದ ಐಪಿಎಸ್ ಅಧಿಕಾರಿ ರತನ್ ಲಾಲ್ ಡಾಂಗಿ ಅವರ ವಿರುದ್ಧ ಪೊಲೀಸ್ ಸಬ್ ಇನ್ಸ್ ಪೆಕ್ಟರ್ ಪತ್ನಿ, ದೈಹಿಕ, ಮಾನಸಿಕ ಮತ್ತು ಕಿರುಕುಳದ ದೂರು ನೀಡಿದ್ದಾರೆ

ಇದಲ್ಲದೆ ರತನ್ ಲಾಲ್ ಡಾಂಗಿ ನನಗೆ ಬ್ಲ್ಯಾಕ್‌ಮೇಲ್ ಮಾಡುತ್ತಿದ್ದಾರೆ ಎಂದು ಕೂಡ ದೂರಲಾಗಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.



ಈ ವಿಷಯದ ಬಗ್ಗೆ ತನಿಖೆ ನಡೆಸಲು ಇಲಾಖೆ ಸಮಿತಿಯನ್ನು ರಚಿಸಿದೆ ಕಳೆದ ಅ. 15 ರಂದು, 2003ರ ಬ್ಯಾಚ್‌ನ ಐಪಿಎಸ್ ಅಧಿಕಾರಿ ಮತ್ತು ಪೊಲೀಸ್ ಮಹಾನಿರ್ದೇಶಕ ರತನ್ ಲಾಲ್ ಡಾಂಗಿ ವಿರುದ್ಧ ದೈಹಿಕ, ಮಾನಸಿಕ ಮತ್ತು ಆರ್ಥಿಕ ಕಿರುಕುಳದ ಆರೋಪದ ಮೇಲೆ ಮಹಿಳೆಯಿಂದ ದೂರು ಬಂದಿತ್ತು.


ದೂರುಗಳ ಗಂಭೀರತೆಯನ್ನು ಪರಿಗಣಿಸಿ, ಪೊಲೀಸ್ ಪ್ರಧಾನ ಕಚೇರಿಯಲ್ಲಿ ಇಬ್ಬರು ಸದಸ್ಯರ ತನಿಖಾ ಸಮಿತಿಯನ್ನು ರಚಿಸಲಾಗಿದೆ ಎಂದು ಹೇಳಿದ್ದಾರೆ.ತನಿಖಾ ಸಮಿತಿಯಲ್ಲಿ ಪೊಲೀಸ್ ಮಹಾನಿರ್ದೇಶಕ ಡಾ. ಆನಂದ್ ಛಾಬ್ರಾ ಮತ್ತು ಉಪ ಪೊಲೀಸ್ ಮಹಾನಿರ್ದೇಶಕ ಮಿಲ್ನಾ ಕುರ್ರೆ ಇದ್ದಾರೆ. ತನಿಖಾ ಸಮಿತಿಯ ವರದಿಯ ಆಧಾರದ ಮೇಲೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಲಾಗಿದೆ.

ಪ್ರಕರಣ ಕುರಿತು ಮಾತನಾಡಿರುವ ರತನ್ ಲಾಲ್ ಡಾಂಗಿ ಆ ಮಹಿಳೆ ಕೆ ವರ್ಷದಿಂದ ನನಗೆ ಬ್ಲ್ಯಾಕ್‌ಮೇಲ್ ಮಡಿ ಹಣ ಸುಲಿಗೆ ಮಾಡಿದ್ದಾರೆ ಎಂದು ಹೇಳಿದ್ದಾರೆ.2017-18ರಲ್ಲಿ ದಾಂತೇವಾಡದಲ್ಲಿ ಉಪ ಪೊಲೀಸ್ ಮಹಾನಿರ್ದೇಶಕರಾಗಿದ್ದಾಗ ಮಹಿಳೆಯೊಬ್ಬರು ತನ್ನ ಪತಿಯ ಕೆಲಸದ ಬಗ್ಗೆ ಸಂಪರ್ಕಿಸಿದ್ದಳು. ಬ್ಯೂಟಿ ಪಾರ್ಲರ್‌ನಲ್ಲಿ ಕೆಲಸ ಮಾಡುತ್ತಿದ್ದ ಮಹಿಳೆ ನಂತರ 2023 ರಲ್ಲಿ ಪೊಲೀಸ್ ತರಬೇತಿ ಕಾಲೇಜಿನ ನಿರ್ದೇಶಕಿಯಾಗಿ ನೇಮಕಗೊಂಡಾಗ ನನ್ನ ಅಶ್ಲೀಲ ವೀಡಿಯೊಗಳನ್ನು ಪ್ರಸಾರ ಮಾಡುವುದಾಗಿ ಹೇಳಿಕೊಂಡು ಹಣ ಕೇಳಿದ್ದಾಳೆ ಎಂದು ಡಾಂಗಿ ಆರೋಪಿಸಿದ್ದಾರೆ.

ಆತಹತ್ಯೆ ಮಾಡಿಕೊಳ್ಳುವುದಾಗಿ ಮತ್ತು ನನ್ನನ್ನುಅದರಲ್ಲಿ ಸಿಲುಕಿಸುವುದಾಗಿ ಬೆದರಿಕೆ ಹಾಕಿದ್ದಾಳೆ. ಅಂದಿನಿಂದ ಈ ಮಹಿಳೆ ನನ್ನಿಂದ ಹಣ ಸುಲಿಗೆ ಮಾಡುತ್ತಿದ್ದಾಳೆ ಮತ್ತು ನನ್ನ ಹೆಂಡತಿಯಿಂದ ಬೇರೆಯಾಗುವಂತೆ ಒತ್ತಡ ಹೇರುತ್ತಿದ್ದಾಳೆ. ಆಕೆಯ ಬ್ಲಾಕ್‌ಮೇಲಿಂಗ್‌ನಿಂದ ಹತಾಶೆಗೊಂಡು, ನಾನು ಪೊಲೀಸ್ ಪ್ರಧಾನ ಕಚೇರಿಗೆ ದೂರು ನೀಡಿದ್ದೇನೆ, ಎಂದು ಅವರು ಹೇಳಿದರು.

# ಪಿಡಿಪಿಎಸ್ ಅಡಿ ಈರುಳ್ಳಿ ಖರೀದಿ ಪ್ರಯತ್ನ : ಸಚಿವ ಶಿವಾನಂದ ಪಾಟೀಲ

**ಬೆಂಗಳೂರು, ಅ.24**- ಈರುಳ್ಳಿ ಬೆಲೆ ಕುಸಿತದ ಹಿನ್ನೆಲೆಯಲ್ಲಿ ಪಿಡಿಪಿಎಸ್ (ಪ್ರೈಸ್ ಡಿಪಿಷಿಯನ್ಸಿ ಪ್ರೊಕ್ಯೂರ್‌ಮೆಂಟ್ ಸ್ಕಿಂ) ಅಡಿಯಲ್ಲಿ ಖರೀದಿಸುವ ಪ್ರಯತ್ನ ನಡೆದಿದೆ ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ತಿಳಿಸಿದ್ದಾರೆ.



ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ಸುರಿದ ಭಾರೀ ಮಳೆಯಿಂದಾಗಿ ಕಟಾವಿಗೆ ಬಂದಿರುವ ಈರುಳ್ಳಿಯು ಅಪಾರ ಪ್ರಮಾಣದಲ್ಲಿ ಹಾನಿಯಾಗಿದೆ. ಕಳೆದ ಸಾಲಿನ ಸರಾಸರಿ ಈರುಳ್ಳಿಯ ಮಾರುಕಟ್ಟೆ ಬೆಲೆಗೆ ಹೋಲಿಕೆ ಮಾಡಿದರೆ ಪ್ರಸಕ್ತ ಸಾಲಿನಲ್ಲಿ ಮಾರಾಟ ದರ ಉತ್ಪಾದನಾ ವೆಚ್ಚಕ್ಕಿಂತ ಕಡಿಮೆ ಇದೆ ಎಂದು ಅಧಿಕಾರಿಗಳು ವರದಿ ಮಾಡಿದ್ದಾರೆ ಎಂದು ಅವರು ಹೇಳಿದ್ದಾರೆ.

ಈ ಹಿನ್ನೆಲೆಯಲ್ಲಿ ಪಿಡಿಪಿಎಸ್ ಅಡಿಯಲ್ಲಿ ಈರುಳ್ಳಿ ಖರೀದಿ ಮಾಡಲು ಅನುಮತಿ ನೀಡಬೇಕು ಎಂದು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುತ್ತಿದೆ ಎಂದು ಹೇಳಿಕೆಯಲ್ಲಿ ತಿಳಿಸಿದ್ದಾರೆ.

ರಾಜ್ಯದಲ್ಲಿ ಮುಂಗಾರು ಮತ್ತು ಹಿಂಗಾರು ಸೇರಿ ಒಟ್ಟು 2.05 ಲಕ್ಷ ಹೆಕ್ಟೆ?ರ್ ಪ್ರದೇಶದಲ್ಲಿ ಈರುಳ್ಳಿ ಬೆಳೆಯಲಾಗುತ್ತಿದ್ದು, ವಾರ್ಷಿಕ ಉತ್ಪನ್ನ 27ಲಕ್ಷ ಮೆಟ್ರಿಕ್ ಟನ್‌ಗಳಾಗಿದೆ. ಪ್ರಮುಖವಾಗಿ ವಿಜಯಪುರ, ಚಿತ್ರದುರ್ಗ, ಬಾಗಲಕೋಟೆ, ವಿಜಯ ನಗರ, ಬೆಳಗಾವಿ, ಧಾರವಾಡ, ಕೊಪ್ಪಳ, ಗದಗ ಜಿಲ್ಲೆಗಳಲ್ಲಿ ಬೆಳೆಯ ಲಾಗುತ್ತಿದೆ ಎಂದಿದ್ದಾರೆ.

ಅತಿಯಾದ ಮಳೆಗೆ ಕಟಾವಿಗೆ ಬಂದ ಈರುಳ್ಳಿ ಬೆಳೆ ಹಾನಿಯಾಗಿದ್ದು, ದಿಡೀರ್‌ಬೆಲೆ ಕುಸಿತಗೊಂಡಿದ್ದು, ಜಮೀನಿನಲ್ಲೇ ಈರುಳ್ಳಿ ಬೆಳೆ ನಾಶವಾಗಿರುವ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಸಭೆ ಸೇರಿ ಚರ್ಚೆ ಮಾಡಿದ್ದು, ಮಾರುಕಟ್ಟೆ ಮಧ್ಯಪ್ರವೇಶ ಯೋಜನೆ ಅಡಿಯಲ್ಲಿ ಖರೀದಿಸಲು ತೋಟಗಾರಿಕೆ ಇಲಾಖೆ ಅಧಿಕಾರಿಗಳು ಶಿಫಾರಸ್ಸು ಮಾಡಿದ್ದರು. ಆದರೆ, ಪಿಡಿಪಿಎಸ್ ಅಡಿ ಈರುಳ್ಳಿ ಖರೀದಿ ಸೂಕ್ತ ಎಂಬ ಅಭಿಪ್ರಾಯ ವ್ಯಕ್ತವಾದ ಹಿನ್ನೆಲೆಯಲ್ಲಿ ಅನುಮತಿ ಕೋರಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುತ್ತಿದೆ ಎಂದು ಸಚಿವರು ಹೇಳಿದ್ದಾರೆ.

# ಮತ ಕದ್ದು ಅಧಿಕಾರಕ್ಕೆ ಬಂದ ಬಿಜೆಪಿ

**ಬೆಂಗಳೂರು, ಅ. 24**- ಮತಗಳ್ಳತನದಿಂದಲೇ ಬಿಜೆಪಿ ಕೇಂದ್ರದಲ್ಲಿ ಅಧಿಕಾರ ಹಿಡಿದಿದೆ ಎಂಬ ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್‌ಗಾಂಧಿಯವರ ಆರೋಪ ಸತ್ಯವಾಗಿದೆ ಎಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ಹೇಳಿದರು.



ಆಳಂದ ಕ್ಷೇತ್ರದಲ್ಲಿ ಒಂದು ಮತದಾರರ ಚೀಟಿ ಅಕ್ರಮವಾಗಿ ರದ್ದುಪಡಿಸಲು 80 ರೂಪಾಯಿ ಕೂಲಿ ನೀಡಿರುವ ವಿಚಾರ ಎಸ್‌ಐಟಿ ತನಿಖೆಯಲ್ಲಿ ಬಯಲಾಗಿರುವ ಬಗ್ಗೆ ಬೆಂಗಳೂರಿನಲ್ಲಿಂದು ಪ್ರತಿಕ್ರಿಯೆ ನೀಡಿದ ಅವರು, ಕಾಂಗ್ರೆಸ್‌ಗೆ ಹೆಚ್ಚಿನ ಒಲವು ಇರುವ ಕಡೆ ಬಿಜೆಪಿ ಕಾಲ್ ಸೆಂಟರ್‌ಗಳನ್ನು ಹುಟ್ಟುಹಾಕಿ ವಂಚನೆ ಎಸಗಿದೆ ಎಂದು ದೂರಿದರು.

ಒಂದು ಮತ ಕಳವಿಗೆ 80 ರೂಪಾಯಿ ಕೂಲಿ ಕೊಡಲಾಗಿದೆ. ಬಿಜೆಪಿಯ ಈ ವಂಚನೆ ಈಗ ಬಯಲಾಗಿದ್ದು, ರಾಹುಲ್‌ಗಾಂಧಿಯವರು ಮಾಡಿರುವ ಆರೋಪ ಸತ್ಯವಾಗಿದೆ. ಅಕ್ರಮದಿಂದಲೇ ಬಿಜೆಪಿ ಕೇಂದ್ರದಲ್ಲಿ ಅಧಿಕಾರ ಹಿಡಿದಿದೆ ಎಂದರು.ಬಿಜೆಪಿ ಎಂದೂ ಬಹುಮತದಿಂದ ಅಧಿಕಾರಕ್ಕೆ ಬಂದಿಲ್ಲ. ಹಿಂಬಾಗಿಲಿನಿಂದ ಅಧಿಕಾರ ಹಿಡಿದಿದೆ. ಚುನಾವಣೆಯಲ್ಲಿ ಅಕ್ರಮ ಮಾಡುವ ಮೂಲಕ ಸ್ವಾಯತ್ತ ಸಂಸ್ಥೆಗಳನ್ನು ದುರುಪಯೋಗಪಡಿಸಿಕೊಂಡು ಅಧಿಕಾರಕ್ಕೆ ಬಂದಿದೆ ಎಂದು ಅವರು ಆರೋಪಿಸಿದರು.

ಮತಗಳ್ಳತನದ ಬಗ್ಗೆ ರಾಹುಲ್‌ಗಾಂಧಿಯವರು ಮಾಡುತ್ತಿರುವ ಆರೋಪ ಸತ್ಯವಾಗಿದೆ. ಎಸ್‌ಐಟಿ ತನಿಖೆಯಲ್ಲಿ ಅದು ಸಾಬೀತು ಆಗುತ್ತಿದೆ ಎಂದು ಅವರು ಹೇಳಿದರು.

ಬಿಜೆಪಿಯವರು ಕಾಂಗ್ರೆಸ್‌ಗೆ ಒಲವು ಇರುವ ಕಡೆ ಕಾಲ್‌ಸೆಂಟರ್ ಮೂಲಕ ಆಸೆ ತೋರಿಸಿ ಮೋಸ ಮಾಡಿದ್ದಾರೆ. ಮತದಾನದ ಹಕ್ಕನ್ನು ಕಸಿದುಕೊಳ್ಳುವ ಕೆಲಸ ಮಾಡಲಾಗಿದೆ. ಇದು ಪ್ರಜಾಪ್ರಭುತ್ವಕ್ಕೆ ಮಾರಕವಾದದ್ದು. ಇದನ್ನು ಎಲ್ಲರೂ ಖಂಡಿಸಬೇಕು ಎಂದು ಹೇಳಿದರು.

ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಅಕ್ರಮದಿಂದ ಅಧಿಕಾರಕ್ಕೆ ಬಂದಿರುವುದರಿಂದ ಈ ಸರ್ಕಾರ ತೊಲಗಬೇಕು ಎಂಬುದು ಜನರ ಇಚ್ಛೆಯಾಗಿದೆ. ಈ ಮತಗಳ್ಳತನದ ಹೋರಾಟವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ದು ಸಂವಿಧಾನ ಮತ್ತು ಪ್ರಜಾಪ್ರಭುತ್ವ ಉಳಿಸುವ ಕೆಲಸವನ್ನು ಕಾಂಗ್ರೆಸ್ ಪಕ್ಷ ಮಾಡಲಿದೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರ ಉತ್ತರಾಧಿಕಾರಿ ಹೇಳಿಕೆ ಬಗ್ಗೆ ಯತೀಂದ್ರ ಸಿದ್ದರಾಮಯ್ಯನವರೇ ಸ್ಪಷ್ಟನೆ ಕೊಟ್ಟಿದ್ದಾರೆ. ಅವರು ಯಾವ ಅರ್ಥದಲ್ಲಿ ಹೇಳಿದ್ದಾರೋ ನನಗೆ ಗೊತ್ತಿಲ್ಲ ಎಂದು ಅವರು ತಿಳಿಸಿದರು.

# ಶಂಕಿತ ಭಯೋತ್ಪಾದಕರಿಬ್ಬರ ಬಂಧನ

**ನವದೆಹಲಿ,ಅ.24**- ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಐಸಿಸ್ 'ಫಿದಾಯೀನ್' (ಆತ್ಯಾಹತ್ಯಾ) ದಾಳಿ ತರಬೇತಿ ಪಡೆಯುತ್ತಿರುವ ಇಬ್ಬರು ಶಂಕಿತ ಭಯೋತ್ಪಾದಕರನ್ನು ದೆಹಲಿ ಪೊಲೀಸರು ಬಂಧಿಸಿ ವಿಚಾರಣೆಗೆ ಒಳಪಡಿಸಿದ್ದಾರೆ.




ದೆಹಲಿಯ ಸಾದಿಕ್ ನಗರ ಮತ್ತು ಭೋಪಾಲ್‌ನಲ್ಲಿ ನಡೆದ ಸಂಘಟಿತ ಕಾರ್ಯಾಚರಣೆಯ ನಂತರ ಖಚಿತ ಮಾಹಿತಿ ಆಧರಿಸಿ ಪೊಲೀಸರು ಭೋಪಾಲ್ ಮೂಲದ ಅದ್ನಾನ್ ಸೇರಿದಂತೆ ಇಬ್ಬರನ್ನು ಬಂಧಿಸಿದ್ದು ಐಸಿಸ್ ಮಾಹಿತಿ ಕಲೆ ಹಾಕುವ ಕೆಲಸದಲ್ಲಿ ನಿರತರಾಗಿದ್ದಾರೆ.

ದೆಹಲಿಯ ಪೊಲೀಸ್ ವಿಶೇಷ ದಳ ರಾಷ್ಟ್ರ ರಾಜಧಾನಿಯಲ್ಲಿದ್ದ ಐಸಿಸ್ ಘಟಕವನ್ನು ಭೇದಿಸಿ "ಫಿದಾಯೀನ್" (ಆತ್ಮಹತ್ಯಾ) ದಾಳಿಗೆ ತರಬೇತಿ ಪಡೆಯುತ್ತಿದ್ದ ಇಬ್ಬರು ಶಂಕಿತ ಭಯೋತ್ಪಾದಕರನ್ನು ಬಂಧಿಸಿದೆ ಎಂದು ಭದ್ರತಾ ಪಡೆಗಳ ಉನ್ನತ ಮೂಲಗಳು ತಿಳಿಸಿವೆ.ಬಂಧಿತ ಇಬ್ಬರು "ಆರೋಪಿಗಳು ಐಸಿಸ್‌ನೊಂದಿಗೆ ನಿಕಟ ಸಂಬಂಧ ಹೊಂದಿದ್ದರು ಮತ್ತು ದೆಹಲಿಯಲ್ಲಿ ಪ್ರಮುಖ ಭಯೋತ್ಪಾದಕ ದಾಳಿ ಸಂಘಟಿಸುವ ಯೋಚನೆಯಲ್ಲಿದ್ದರು ಎನ್ನುವುದು ಪ್ರಾಥಮಿಕ ತನಿಖೆಯಿಂದ ಪತ್ತೆಯಾಗಿದೆ.

ಬಂಧಿತ ಇಬ್ಬರು ಆತ್ಯಾಹತ್ಯಾ ದಾಳಿ ತರಬೇತಿ ಪಡೆಯುತ್ತಿದ್ದ ಇಬ್ಬರಿಂದ ಅಪಾರ ಪ್ರಮಾಣದ ಎಲೆಕ್ಟ್ರಾನಿಕ್ ಸಾಧನಗಳು ಮತ್ತು ಅಪರಾಧ ಸಾಮಗ್ರಿಗಳನ್ನು ವಶಪಡಿಸಿಕೊಳ್ಳಲಾಗಿದೆ" ಎಂದು ಪೊಲೀಸ್ ಅಧಿಕಾರಿಗಳು ಮಾಹಿತಿ ಹಂಚಿಕೊಂಡಿದ್ದಾರೆ.

ಶಂಕಿತರ ಜಾಲ ಮತ್ತು ಅವರ ಯೋಜನೆಗಳ ವ್ಯಾಪ್ತಿಯನ್ನು ಖಚಿತಪಡಿಸಿಕೊಳ್ಳಲು ಅವರನ್ನು ವಿಚಾರಣೆ ನಡೆಸಲಾಗುತ್ತಿದೆ .ಆತ್ಯಹತ್ಯಾ ಬಾಂಬ್ ತರಬೇತಿ ಪಡೆಯುತ್ತಿದ್ದ ಇಬ್ಬರನ್ನು ಬಂಧಿಸುವ ಮೂಲಕ ದೆಹಲಿಯಲ್ಲಿ ಸಂಭವನೀಯ ಭಯೋತ್ಪಾದಕ ದಾಳಿಯನ್ನು ತಪ್ಪಿಸಲಾಗಿದೆ ಎಂದು ತಿಳಿಸಿದ್ದಾರೆ.ಕಾರ್ಯಾಚರಣೆಯ ಸಮಯದಲ್ಲಿ ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳ ಸಂಗ್ರಹವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಆರಂಭಿಕ ವರದಿಗಳು ಸೂಚಿಸಿವೆ ಮತ್ತು ಬಂಧಿತ ಶಂಕಿತರಲ್ಲಿ ಒಬ್ಬನನ್ನು ಅದ್ನಾನ್ ಎಂದು ಗುರುತಿಸಲಾಗಿದೆ ಎಂದು ತಿಳಿಸಲಾಗಿದೆ.

ಹೆಚ್ಚುವರಿ ಆಯುಕ್ತ ಪ್ರಮೋದ್ ಕುಶ್ವಾಹ ಮತ್ತು ಎಸಿಪಿ ಲಲಿತ್ ಮೋಹನ್ ನೇಗಿ ನೇತೃತ್ವದ ತಂಡ ಈ ಕಾರ್ಯಾಚರಣೆಯನ್ನು ನಡೆಸಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.ಪತ್ತೆಯಾದ ಮಾಡ್ಯೂಲ್ ಐಸಿಸ್‌ನಿಂದ ಪ್ರೇರಿತವಾಗಿದೆ ಎಂದು ಹೇಳಲಾಗಿದೆ. ಇಸ್ಲಾಮಿಕ್ ಸ್ಟೇಟ್ ಸೋಗಿನಲ್ಲಿ ಅಂತಹ ಜಾಲಗಳನ್ನು ನಿರ್ವಹಿಸುವ ಪಾಕಿಸ್ತಾನದ ಐಎಸ್‌ಐ ಜೊತೆ ಸಂಪರ್ಕವನ್ನು ಹೊಂದಿರಬಹುದು ಎಂದು ಶಂಕೆ ವ್ಯಕ್ತಪಡಿಸಲಾಗಿತ್ತು ಈ ಸಂಬಂಧ ಎಲ್ಲಾ ಮೂಲಗಳಿಂದ ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ಅಧಿಕಾರಿಗಳು ಸಂಪೂರ್ಣ ಜಾಲವನ್ನು ಪತ್ತೆಹಚ್ಚಲು ಮತ್ತು ಇತರ ಸಹಚರರನ್ನು ಗುರುತಿಸಲು ಕೆಲಸ ಮಾಡುತ್ತಿರುವುದರಿಂದ ಕಾರ್ಯಾಚರಣೆ ಮುಂದುವರಿಸಿದ್ದಾರೆ. ಇಬ್ಬರು ಶಂಕಿತರ ವಿಚಾರಣೆ ಮುಂದುವರೆದಿದೆ, ಅವರ ಯೋಜನೆಗಳು ಮತ್ತು ಅಂತರರಾಷ್ಟ್ರೀಯ ಭಯೋತ್ಪಾದಕ ಸಂಘಟನೆಗಳೊಂದಿಗೆ ಸಂಭಾವ್ಯ ಸಂಪರ್ಕಗಳನ್ನು ತನಿಖೆ ಮಾಡುತ್ತಿವೆ ಎಂದು ತಿಳಿಸಿದ್ದಾರೆ.

# ನವೆಂಬರ್ ಕ್ರಾಂತಿ ಗೊತ್ತಿಲ್ಲ

**ಬೆಂಗಳೂರು, ಅ. 24**- ನವೆಂಬರ್ ಕ್ರಾಂತಿಯ ಬಗ್ಗೆ ನನಗೇನೂ ಗೊತ್ತಿಲ್ಲ ಎಂದು ಹೇಳುವ ಮೂಲಕ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಸಿಎಂ ಬದಲಾವಣೆ ವಿಚಾರದ ಬಗ್ಗೆ ಕುತೂಹಲದ ಹೇಳಿಕೆ ನೀಡಿದ್ದಾರೆ.



ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂದಿನ ಮುಖ್ಯಮಂತ್ರಿ ಯಾರು ಆಗುತ್ತಾರೋ ಗೊತ್ತಿಲ್ಲ. ಎಲ್ಲಾ ಅವರವರ ಹಣೆ ಬರಹ. ಯಾರ ಹಣೆ ಬರಹದಲ್ಲಿ ಏನಿದೆಯೋ ಅದನ್ನು ಯಾರ ಕೈಯಿಂದಲೂ ತಪ್ಪಿಸಲು ಆಗುವುದಿಲ್ಲ ಎಂದು ಮಾರ್ಮಿಕವಾಗಿ ಹೇಳಿದರು.

ಸಿಎಂ ಬದಲಾವಣೆ ವಿಚಾರದ ಬಗ್ಗೆ ನನಗೇನು ಗೊತ್ತಿಲ್ಲ. ಅಂತಿಮವಾಗಿ ಹೈಕಮಾಂಡ್ ತೀರ್ಮಾನ ಮಾಡುತ್ತದೆ. ಹೈಕಮಾಂಡ್ ಅಣತಿಯಂತೆ ಎಲ್ಲವೂ ಆಗುತ್ತೆ. ಯಾರು ಬೇಕಾದರೂ ಮುಖ್ಯಮಂತ್ರಿ ಆಗಬಹುದು ಎಂದರು.

ಈ ಹಿಂದೆ ಬಿಜೆಪಿಯಲ್ಲಿ ಜಗದೀಶ್‌ಶೆಟ್ಟರ್, ಬಸವರಾಜ ಬೊಮ್ಮಾಯಿ ಮುಖ್ಯಮಂತ್ರಿ ಆಗಲಿಲ್ಲವೇ, ಯಾರ ಹಣೆ ಬರಹದಲ್ಲಿ ಏನಿರುತ್ತೋ ಯಾರಿಗೆ ಗೊತ್ತು ಎಂದು ಹೇಳಿದರು.

ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯನವರಿದ್ದಾರೆ. ಹಾಗಾಗಿ ಸಿಎಂ ಬದಲಾವಣೆ ಬಗ್ಗೆ ಮಾತನಾಡುವುದು ಸರಿ ಹೋಗುವುದಿಲ್ಲ. ಎಲ್ಲವನ್ನು ಹೈಕಮಾಂಡ್ ನೋಡಿಕೊಳ್ಳುತ್ತದೆ ಎಂದರು.

ಯತೀಂದ್ರರವರು ಸತೀಶ್ ಜಾರಕಿಹೊಳಿಯವರಿಗೆ ಮುಖ್ಯಮಂತ್ರಿಯಾಗುವ ಅವಕಾಶ ಇದೆ ಎಂದು ಹೇಳಿರುವ ಬಗ್ಗೆಯೂ ಪ್ರತಿಕ್ರಿಯಿಸಿದ ಅವರು, ನನಗೆ ಅದೆಲ್ಲಾ ಗೊತ್ತಿಲ್ಲ, ಹೈಕಮಾಂಡ್ ತೀರ್ಮಾನ ಮಾಡುತ್ತದೆ ಎಂದು ಚುಟುಕಾಗಿ ಹೇಳಿದರು.

## ವಿದ್ಯುತ್ ಶಾರ್ಟ್ ಸರ್ಕ್ಯೂಟ್ ನಿಂದ ಕಿರಾಣಿ ಅಂಗಡಿ ಹಾನಿ

**ಗುರುಮಠಕಲ್:ಅ.24**-ಪಟ್ಟಣದ ಮುಖ್ಯ ರಸ್ತೆಯಲ್ಲಿನ ಲಕ್ಷ್ಮೀ ಟ್ರೇಡಿಂಗ್ ಕಿರಾಣಿ ಅಂಗಡಿ ಬುಧವಾರ ಮಧ್ಯರಾತ್ರಿ ಸುಮಾರಿಗೆ .ವಿದ್ಯುತ್ ಶಾರ್ಟ್ ಸರ್ಕಿಟ್ ನಿಂದ ಉಂಟಾದ ಬೆಂಕಿಯಿಂದ ಪಟ್ಟಣದ ಅಂಗಡಿಯೊಂದರ ಎಲ್ಲಾ ವಸ್ತುಗಳನ್ನು ಹೊತ್ತಿಉರಿದು ಅಪಾರ ಹಾನಿಉಂಟಾಗಿದೆ. ಶ್ರೀನಿವಾಸ ಹೋಲ್ ಸೇಲ್ ಕಿರಾಣಿ ಅಂಗಡಿ ಇದಾಗಿದ್ದು . ನೀರಿನ ಟ್ಯಾಂಕರ್ ಮೂಲಕ ನೀರುತರಸಿ ಬಕೆಟಗಳ ಸಹಾಯದಿಂದ ಬೆಂಕಿ ನಿಯಂತ್ರಿಸಲು ಹರಸಹಾಸ ಪಟ್ಟರು ಆದರೆ ಆಗ್ನಿಶಾಮಕ ದಳದ ವಾಹನ ಯಾದಗಿರಿ ನಗರದಿಂದ ತಡವಾಗಿ ಆಗಮಿಸಿದ ಕಾರಣ ಆ ವೇಳೆಗೆ ಅಂಗಡಿಯ ಬಹುತೇಕ ಬಾಗ ಸಂಪೂರ್ಣವಾಗಿ ಬೆಂಕಿಗಾವುತಿ ಯಾಯಿತು.ಅಗ್ನಿ ಶಾಮಕ ಠಾಣೆಗೆ ಅಗ್ರಹ ಪಟ್ಟಣದಲ್ಲಿ ಆಗಾಗ್ಗೆ ಇಂತಹ ಅಗ್ನಿ ಅನಾಹುತ ಸಂಭವಿಸುತ್ತಿದ್ದರುಇಂದಿಗೂ ಅಗ್ನಿಶಾಮಕ ಠಾಣೆ ಸ್ಥಾಪನೆಯಾಗಿಲ್ಲ ಎಂಬುದರ ಬಗ್ಗೆ ಸ್ಥಳಿಯರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕೂಡಲೆ ಅಗ್ನಿ ಶಾಮಕ ಠಾಣೆ ಸ್ಥಾಪನೆಯಾಗಬೇಕು ಎಂದು ವ್ಯಾಪಾರಸ್ಥರು ಮತ್ತು ಸ್ಥಳಿಯರು ಅಗ್ರಹಿಸಿದ್ದಾರೆ. ಶೀಘ್ರದಲ್ಲಿ ಅಗ್ನಿ ಶಾಮಕ ಠಾಣೆಯನ್ನು ಸ್ಥಾಪಿಸಿ. ತಹಸೀಲ್ದಾರ್ ಶಾಂತಗೌಡಬಿರಾದಾರ, ಪಿ ಐ ವೀರಣ್ಣ ದೊಡ್ಡಮನಿ ಸ್ಥಳಕ್ಕೆ ಬೇಟಿ ನೀಡಿ ಪರಿಸಿಲಿಸಿದರು.

ಯುವ ಮಾರ್ಗ

ಶನಿವಾರ 25–10–2025

# ರಾಯಚೂರು ಜಿಲ್ಲೆಯಲ್ಲಿ ಮಿಂಚಿನ ನೋಂದಣಿ ಅಭಿಯಾನ

**ರಾಯಚೂರು,ಅ.24–** ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ–2026ರ ಮತದಾರರ ಪಟ್ಟಿ ಸಿದ್ಧಪಡಿಸುವ ಹಿನ್ನೆಲೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಮತದಾರರ ನೋಂದಣಿ ಮಾಡುವ ಸಂದೇಶ ನೀಡುವ ನಿಟ್ಟಿನಲ್ಲಿ ವಿಶೇಷ ಮಿಂಚಿನ ನೋಂದಣಿ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕುಮಾರ್ ಕಾಂದೂ ಅವರು ತಿಳಿಸಿದ್ದಾರೆ.

ವಿಶೇಷ ಮಿಂಚಿನ ನೋಂದಣಿ ಅಭಿಯಾನವು ಜಿಲ್ಲೆಯಲ್ಲಿ ಅಕ್ಟೋಬರ್ 27, 30 ಹಾಗೂ ನವಂಬರ್ 03ರಂದು ಹಮ್ಮಿಕೊಂಡಿದ್ದು, ನಿರೀಕ್ಷಿತ ಪ್ರಮಾಣದಲ್ಲಿ ಮತದಾರರ ನೋಂದಣಿ ಮಾಡಬೇಕು. ಅಲ್ಲದೆ ವಿಶೇಷ ಮಿಂಚಿನ ನೋಂದಣಿ ಅಭಿಯಾನ ಕಾರ್ಯಕ್ರಮಗಳನ್ನು ವಾಟ್ಸಾಪ್, ಟ್ವಿಟರ್, ಫೇಸ್‌ಬುಕ್, ಇನ್‌ಸ್ಟಾಗ್ರಾಮ್ ಮೂಲಕ ವ್ಯಾಪಕ ಪ್ರಚಾರ ಮಾಡಿ ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ–2026ರ ಮತದಾರರ ಪಟ್ಟಿ ಸಿದ್ಧತೆಗೆ ಸಹಕರಿಸಬೇಕು.ವಿಶೇಷ ಮಿಂಚಿನ ನೋಂದಣಿ ಅಭಿಯಾನ ಕಾರ್ಯಕ್ರಮಕ್ಕೆ ಎಲ್ಲಾ ರೀತಿಯ ಸಿದ್ಧತೆ ಮಾಡಬೇಕು ಎಂದು ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ನೋಂದಣಿ ಅಚ್ಚುಕಟ್ಟಾಗಿ ನಡೆಯಲಿ: ಜಿಪಂ ಸಿಇಓ

**ರಾಯಚೂರು,ಅ.24–**ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣಾ ಮತದಾರರ ನೋಂದಣಿ ಪ್ರಕ್ರಿಯೆ ಈಗಾಗಲೇ ಆರಂಭವಾಗಿದ್ದು, ನಿರೀಕ್ಷಿತ ಮಟ್ಟದಲ್ಲಿ ನೋಂದಣಿಗೆ ಕ್ರಮ ವಹಿಸಬೇಕು. ಇದಕ್ಕಾಗಿ ಎಲ್ಲಾ ಅಧಿಕಾರಿಗಳು, ನೋಡಲ್ ಅಧಿಕಾರಿಗಳು ಪ್ರೌಢಶಾಲೆ, ವಿಶ್ವವಿದ್ಯಾಲಯ, ವೈದ್ಯಕೀಯ ಕಾಲೇಜುಗಳು, ಪದವಿಪೂರ್ವ, ಪದವಿ ಕಾಲೇಜುಗಳಲ್ಲಿ ವ್ಯಾಪಕ ಪ್ರಚಾರ ಮಾಡಿ ನೋಂದಣಿ ಸಂಖ್ಯೆಯನ್ನು ಹೆಚ್ಚಿಸುವಂತೆ ಸ್ವೀಪ್ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕುಮಾರ್ ಕಾಂದೂ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.ಭಾರತ ಚುನಾವಣಾ ಆಯೋಗದ ಹಾಗೂ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರ ನಿರ್ದೇಶನದಂತೆ ದಿನಾಂಕ: 06.11.2025ರೊಳಗೆ ಮತದಾರರ ನೋಂದಣಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕಿದೆ. ಆದ್ದರಿಂದ ಎಲ್ಲಾ ಅರ್ಹ ಮತದಾರರ ನೋಂದಣಿಯನ್ನು ಮಾಡಿಸಲು ಅಕ್ಟೋಬರ್ 27, 30 ಹಾಗೂ ನವಂಬರ್ 03ರಂದು ಮತದಾರರ ಮಿಂಚಿನ ನೋಂದಣಿ ಅಭಿಯಾನ ಆಯೋಜಿಸಲು ಅಧಿಸೂಚನೆಯನ್ನು ಹೊರಡಿಸಲಾಗಿದ್ದು, ಅಭಿಯಾನದ ದಿನಾಂಕಗಳಂದು ಮಹಾನಗರ ಪಾಲಿಕ ಆಯುಕ್ತರು, ತಹಶೀಲ್ದಾರರು ಹಾಗೂ ಸಹಾಯಕ ಮತದಾನ ನೋಂದಣಾಧಿಕಾರಿಗಳು ತಮ್ಮ ಕ್ಷೇತ್ರವ್ಯಾಪ್ತಿಗೆ ಒಳಪಡುವ ಎಲ್ಲಾ ತಾಲೂಕು ಮಟ್ಟದ ಅಧಿಕಾರಿಗಳ ಸೇವೆಯನ್ನು ಪಡೆದು ಅವರೊಂದಿಗೆ ಕಂದಾಯ ಇಲಾಖೆ, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಇತರೆ ಇಲಾಖೆಯ ಅಧಿಕಾರಿಗಳೊಂದಿಗೆ ತಂಡಗಳನ್ನು ರಚಿಸಿ ಅರ್ಹ ಶಿಕ್ಷಣ ಸಂಸ್ಥೆಗಳನ್ನು ಗುರುತಿಸಿ ಅಲ್ಲಿ ನೋಂದಣಿಗಾಗಿ ಅರ್ಹರಿರುವ ಮತದಾರರನ್ನು ಕಚೇರಿ ಮುಖ್ಯಸ್ಥರ ಮುಖಾಂತರ ಸಂಪರ್ಕಿಸಿ, ನಿಗದಿಪಡಿಸಿದ ಸಮಯದೊಳಗೆ ನಿಯಮಾನುಸಾರ ನಮೂನೆ–19ರ ಅರ್ಜಿಯೊಂದಿಗೆ ಪೂರಕ ದಾಖಲೆಗಳನ್ನು ಸ್ವೀಕರಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.ಜಿಲ್ಲಾ ಮಟ್ಟದಲ್ಲಿ ಸಂಬಂಧಿಸಿದ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರು, ಕಲಬುರಗಿ ಕಾಲೇಜು ಶಿಕ್ಷಣ ಇಲಾಖೆಯ ಜಂಟಿ ನಿರ್ದೇಶಕರು, ವಿಶ್ವವಿದ್ಯಾನಿಲಯದ ಕುಲಸಚಿವರು ಹಾಗೂ ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ನೋಡಲ್ ಅಧಿಕಾರಿಗಳೆಂದು ನೇಮಕ ಮಾಡಿ ಆದೇಶಿಸಲಾಗಿದ್ದು, ಈ ಎಲ್ಲಾ ಅಧಿಕಾರಿಗಳು ಕೂಡಲೇ ಅರ್ಹ ಮತದಾರರನ್ನು ಗುರುತಿಸಿ ನೋಂದಣಿಗಾಗಿ ಅರ್ಜಿಗಳನ್ನು ಸ್ವೀಕರಿಸಲು ವ್ಯಾಪಕ ಪ್ರಚಾರ ನೀಡಲು ಮತ್ತು ಅರ್ಜಿ ಸ್ವೀಕೃತಿ ಸಂಖ್ಯೆಯನ್ನು ಹೆಚ್ಚಿಸಬೇಕು ಎಂದು ಸೂಚನೆ ನೀಡಿದ್ದಾರೆ.ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ–2026ರ ಚುನಾವಣೆಯ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವ ಸಂಬಂಧ ಜಿಲ್ಲಾ ಮಟ್ಟದ ಮೇಲ್ವಿಚಾರಣಾಧಿಕಾರಿಯನ್ನಾಗಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಯವರನ್ನು ನೇಮಿಸಲಾಗಿದ್ದು, ಸಂಬಂಧಿಸಿದ ಅಧಿಕಾರಿಗಳು ಪ್ರತಿ ದಿನ ಮಾಹಿತಿಯನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ನೀಡಿ ಅದರ ವರದಿಯನ್ನು ಕಡ್ಡಾಯ ಸಲ್ಲಿಸಬೇಕೆಂದು ಸೂಚನೆ ನೀಡಿದ್ದಾರೆ.

### ಫೋಟೊ ಸುದ್ದಿ



**ಮಾನ್ವಿ:** ತಾಲೂಕಿನ ನೀರಮಾನ್ವಿ ಗ್ರಾಮದ ಮುಜೂರಾಯಿ ಇಲಾಖೆಯ ಧಾರ್ಮಿಕ ದತ್ತಿ ಇಲಾಖೆಗೆ ಸೇರಿದ ಶ್ರೀ ರೇಣುಕಾ ಯಲ್ಲಮ್ಮ ದೇವಿ ದೇವಸ್ಥಾನದಲ್ಲಿ ಬುಧುವಾರ ಸರ್ಕಾರದ ಅದೇಶದಂತೆ ದಿಪಾವಳಿ ಹಬ್ಬದ ಅಂಗವಾಗಿ ತಹಸೀಲ್ದಾರ್ ಭಿಮರಾಯ ಬಿ.ರಾಮಸಮುದ್ರ ರವರು ಗೋ ಪೂಜೆಯನ್ನು ನೆರವೇರಿಸಿದರು ದೇವಸ್ಥಾನದ ಆರ್ಚಕರಾದ ಮಲ್ಲಿಕಾರ್ಜುನ ಪೂಜಾರಿ ಸೇರಿದಂತೆ ಇನ್ನಿತರರು ಇದ್ದರು.

# ನಕಲಿ ಭತ್ತದ ಬೀಜ ಮಾರಾಟ : ಜಿಲ್ಲಾಧಿಕಾರಿಗಳಿಗೆ ದಲಿತ ಸೇನೆ ಮತ್ತು ಜನಸೇವಾ ಫೌಂಡೇಶನ್ ಮನವಿ

**ಯುವ ಮಾರ್ಗ ಸುದ್ದಿ**



**ರಾಯಚೂರು,ಅ.24–** ಮಾನ್ವಿ ತಾಲೂಕಿನ ವಿವಿಧ ಹಳ್ಳಿಗಳ ರೈತರಿಗೆ ನಕಲಿ ಮತ್ತು ಕಳಪೆ ಗುಣಮಟ್ಟದ ಬತ್ತದ ಬೀಜ ಮಾರಾಟವಾದ ಪರಿಣಾಮ ಸಾವಿರಾರು ರೈತರು ಬೆಳೆ ನಷ್ಟದ ಭೀತಿಯಲ್ಲಿ ಬದುಕುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಇಂದು ದಲಿತ ಸೇನೆ ಮತ್ತು ಜನಸೇವಾ ಫೌಂಡೇಶನ್ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ದಲಿತ ಸೇನೆ ರಾಜ್ಯ ಸಂಘಟನಾ ಕಾರ್ಯದರ್ಶಿ ಹಾಗೂ ಜನಸೇವಾ ಫೌಂಡೇಶನ್ ರಾಜ್ಯಾಧ್ಯಕ್ಷ ಡಾ. ಜಾವೀದ್ ಖಾನ್ ಅವರು ಹೇಳಿದರು.

"ನೀಲಕಂಠೇಶ್ವರ ಸೀಡ್ಸ್ ಕಾರ್ಪೊರೇಷನ್‌ನ ಕಳಪೆ ಬತ್ತದ ಬೀಜಗಳಿಂದ ರೈತರಿಗೆ ನಷ್ಟ ಉಂಟಾಗಿದೆ. ಇಂತಹ ನಕಲಿ ಬೀಜ ಮಾರಾಟಕ್ಕೆ ಕಾರಣರಾದ ಕಂಪನಿಗಳ ಪರವಾನಗಿ ರದ್ದುಪಡಿಸಿ, ಅಧಿಕಾರಿಗಳ ನಿರ್ಲಕ್ಷ್ಯವನ್ನೂ ತನಿಖೆ ಮಾಡಬೇಕು. ರೈತರ ನಷ್ಟಕ್ಕೆ ಸರ್ಕಾರದಿಂದ ತಕ್ಷಣ ಪರಿಹಾರ ನೀಡಬೇಕು," ಎಂದು ಆಗ್ರಹಿಸಿದರು.

ಜನಸೇವಾ ಫೌಂಡೇಶನ್ ಮಾನ್ವಿ ತಾಲೂಕು ಅಧ್ಯಕ್ಷ ತಾಜುದ್ದೀನ್ ಚೀಕಲಪರ್ವಿ ಮಾತನಾಡಿ, "ಮಾನ್ವಿ ತಾಲೂಕಿನ 2000 ಎಕರೆ ನೀರಾವರಿ ಭತ್ತದ ಹೊಲಗಳಿಗೆ ಕಳಪೆ ಬೀಜ ವಿತರಣೆ ಆಗಿದ್ದು, ರೈತರು ನಷ್ಟಕ್ಕೆ ಒಳಗಾಗಿದ್ದಾರೆ. ಅಧಿಕಾರಿಗಳು ಮೌನ ವಹಿಸಿರುವುದು ಖಂಡನೀಯ. ರೈತರ ಹಿತಕ್ಕಾಗಿ ನ್ಯಾಯ ದೊರಕುವವರೆಗೆ ಹೋರಾಟ ಮುಂದುವರಿಯಲಿದೆ," ಎಂದು ಹೇಳಿದರು.

ಈ ಸಂದರ್ಭದಲ್ಲಿ ದಲಿತ ಸೇನೆ ಜಿಲ್ಲಾಧ್ಯಕ್ಷ ಮಾರುತಿ ಚಿಕ್ಕಸೂಗೂರು, ಬಾಬು ರಾವ್, ರಾಜಾಸಾಬ್ ನೀರಮಾನ್ವಿ, ಸಿದ್ದರೆಡ್ಡಿ, ಪ್ರೊ ಚಂದ್ರಶೇಖರ, ಕೃಷ್ಣ ಮಾರ್ಷಲ್, ಸುರೇಶ ಚಿಕ್ಕಸುಗೂರು, ಮೌಲ, ಆಜೀತ್, ಗೋಕುಲ್ ಸೇರಿದಂತೆ ದಲಿತ ಸೇನೆ ಹಾಗೂ ಜನಸೇವಾ ಫೌಂಡೇಶನ್ ಕಾರ್ಯಕರ್ತರು, ರೈತರು ಹಾಗೂ ಸಂಘಟನೆಯ ನಾಯಕರು ಉಪಸ್ಥಿತರಿದ್ದರು.

# ಇಂದು ಸಿ.ಐ.ಟಿ.ಯು.8 ನೇ ರಾಯಚೂರು ಜಿಲ್ಲಾ ಸಮ್ಮೇಳನ: ಹೆಚ್. ಶರ್ಫುದ್ದೀನ್ ಪೋತ್ನಾಳ್

**ಯುವ ಮಾರ್ಗ ಸುದ್ದಿ**



**ಮಾನ್ವಿ,ಅ.24–** ಪಟ್ಟಣದ ನ್ಯೂ ಫ್ರೆಂಡ್ಸ್ ಫಂಕ್ಷನ್ ಹಾಲ್ ನಲ್ಲಿ ಅ.25 ರಂದು ಬೆಳಿಗ್ಗೆ 11ಕ್ಕೆ ಸಿ,ಐ,ಟಿ, ಯು ಎಂಟನೇ ರಾಯಚೂರು ಜಿಲ್ಲಾ ಮಟ್ಟದ ಸಮ್ಮೇಳನವನ್ನು ಅಯೋಜಿಸಲಾಗಿದ್ದು ಸಮ್ಮೇಳನದಲ್ಲಿ ರಾಯಚೂರು ಜಿಲ್ಲೆಯಲ್ಲಿ ಮುಂದಿನ ಮೂರು ವರ್ಷಗಳ ಕಾಲ ಕೈಗೊಳ್ಳಬೇಕಾದ ಕಾರ್ಯ ಯೋಜನೆಯನ್ನು ಚರ್ಚೆಮಾಡುವುದು ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಅನುಸರಿಸುತ್ತಿರುವ ಕಾರ್ಮಿಕ ವಿರೋಧಿ ನೀತಿಗಳ ಬಗ್ಗೆ ಚರ್ಚಿಸಿ ಪರಿಹಾರಕ್ಕಾಗಿ ಹೋರಾಟ ರೂಪಿಸಲು ನಿರ್ಣಯ ತೆಗೆದುಕೊಳ್ಳಲಾಗುವುದು. ಸೇರಿದಂತೆ ವಿವಿಧ ವಿಷಯಗಳ ಬಗ್ಗೆ ವಿಸ್ತಾರವಾಗಿ ಚರ್ಚೆ ನಡೆಸಿ ಅಂಗೀಕರಿಸಿಲಾಗುವುದು. ಸಮ್ಮೇಳನವನ್ನು ಸಿಐಟಿಯು ರಾಜ್ಯ ಕಾರ್ಯದರ್ಶಿ ಹಾಗೂ ಹಟ್ಟಿ ಚಿನ್ನದ ಗಣಿ ಕಾರ್ಮಿಕ ಸಂಘದ ಅಧ್ಯಕ್ಷರಾದ ಕಾಮ್ರೆಡ್ ಕೆ. ಮಹಾಂತೇಶ್ ಉದ್ಘಾಟಿಸಲಿದ್ದಾರೆ, ಸಮ್ಮೇಳನದ ಅಧ್ಯಕ್ಷತೆಯನ್ನು ಸಿಐಟಿಯು ಜಿಲ್ಲಾ ಸಮಿತಿ ಅಧ್ಯಕ್ಷರಾದ ಕಾಮ್ರೆಡ್ ಎಚ್. ಪದ್ಮಾ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಗ್ರಾ.ಪಂ.ನೌ.ಸಂಘದ ರಾಜ್ಯ ಉಪಾಧ್ಯಕ್ಷರಾದ ಕಾಮ್ರೆಡ್ ಆರ್.ಎಸ್. ಬಸವರಾಜ್, ಜಿಲ್ಲಾ ಕಾರ್ಯದರ್ಶಿಗಳಾದ ಕಾಮ್ರೇಡ ಡಿ.ಎಸ್. ಶರಣಬಸವ, ಕರ್ನಾ ಟಕ ಪ್ರಾಂತ ರೈತ ಸಂಘದ ಜಿಲ್ಲಾ ಉಪಾಧ್ಯಕ್ಷರಾದ ಕಾಮ್ರೆಡ್ ಕೆ. ಜಿ.ವೀರೇ ಶ್, ಸಾಂಸ್ಕೃತಿಕ ಸಂಘಟನೆ ಸಮುದಾಯ ದ ರಾಜ್ಯ ಖಜಾಂಚಿಗಳಾದ ಎಸ್. ದೇವೇಂದ್ರಗೌಡ ಸಿಂಧನೂರು, ಕಟ್ಟಡ ಕಾರ್ಮಿಕರ ಸಂಘದ ಜಿಲ್ಲಾ ಅಧ್ಯಕ್ಷರಾದ ಕಾಮ್ರೆಡ್ ರುದ್ರಪ್ಪ ನಾಯಕ, ಗ್ರಾಮ ಪಂಚಾಯಿತಿ ನೌಕರ ಸಂಘದ ಜಿಲ್ಲಾ ಅಧ್ಯಕ್ಷರಾದ ಕಾಮ್ರೆಡ್ ಮಲ್ಲಿಕಾರ್ಜುನ ಮನಸಲಾಪುರ, ಸಿಐಟಿಯು ಜಿಲ್ಲಾ ಮುಖಂಡರುಗಳಾದ ಕಾಮ್ರೆಡ್ ಶಬ್ಬೀರ್ ಕಾಮ್ರೆಡ್ ಗಿರಿಯಪ್ಪ, ಕಾಮ್ರೆಡ್ ಹನೀಫ್, ಕಾಮ್ರೆಡ್ ರೇಣುಕಮ್ಮ, ಕಾಮ್ರೆಡ್ ವರಲಕ್ಷ್ಮಿ, ಕಾಮ್ರೆಡ್ ಅನ್ವರ್ ಪಾಷಾ ಇನ್ನಿತರ ಜಿಲ್ಲಾ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ. ಈ ಸಮ್ಮೇಳನದಲ್ಲಿ ಮುಂದಿನ ಮೂರು ವರ್ಷಕ್ಕೆ ನೂತನ ಜಿಲ್ಲಾ ಸಮಿತಿ ಆಯ್ಕೆನಡೆಯಲಿದೆ ಎಂದು ಸಿಐಟಿಯು ಜಿಲ್ಲಾ ಉಪಾಧ್ಯಕ್ಷರು ಮಾನ್ವಿ ತಾಲೂಕ ಸಿ. ಐ. ಟಿ. ಯು. ಅಧ್ಯಕ್ಷರಾದ ಹೆಚ್. ಶರ್ಫುದ್ದೀನ್ ಪೋತ್ನಾಳ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೆಲ್ಮೆಟ್ ಕಡ್ಡಾಯ ಜಾಗೃತಿ ಅಭಿಯಾನಕ್ಕೆ ಡಿವೈಎಸ್ ಪಿ ಚಾಲನೆ

**ಯುವ ಮಾರ್ಗ ಸುದ್ದಿ**




**ಲಿಂಗಸುಗೂರು,ಅ.24–** ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸುವ ಮೂಲಕ ಸುರಕ್ಷಿತ ಸವಾರಿ ಮಾಡಬೇಕು. ನಿಯಮ ಮಾಡಿರುವುದು ನಿಮ್ಮಗಳ ಆರೋಗ್ಯ ಕಾಳಜಿಯಿಂದ. ಕಾನೂನು ಉಲ್ಲಂಘನೆಗೆ ಅವಕಾಶ ನೀಡುವುದಿಲ್ಲ. ಬೈಕ್ ಸವಾರರು ಹಾಗೂ ಹಿಂಬದಿ ಸವಾರರೂ ಹೆಲ್ಮೆಟ್ ಧರಿಸಬೇಕು. ಎಂದು ಡಿವೈಎಸ್‌ಪಿ ದತ್ತಾತ್ರೇಯ ಕಾರ್ನಾಡ್ ತಿಳಿಸಿದರು.

ಲಿಂಗಸುಗೂರು ಪೋಲಿಸ್‌ಠಾಣೆ ವತಿಯಿಂದ ಶುಕ್ರವಾರ ಆಯೋಜಿಸಿದ್ದ ಸೈಬರ್ ಕ್ರೈಂ ಜಾಗೃತಿ ಹಾಗೂ ಕಡ್ಡಾಯ ಹೆಲ್ಮೆಟ್ ಅಭಿಯಾನಕ್ಕೆ ಚಾಲನೆ ನೀಡಿ, ಸಾರ್ವಜನಿಕರಲ್ಲಿ ಸೈಬರ್ ಅಪರಾಧಗಳು ಆಗುವ ರೀತಿ, ಜನ ಮೋಸ ಹೋಗುವ ರೀತಿಯ ಬಗ್ಗೆ ಜಾಗೃತಿ ಮೂಡಿಸಿದರು.

ಠಾಣೆಯಿಂದ ಹೊರಟ ಪೋಲಿಸರ ಬೈಕ್ ರ್ಯಾಲಿ ಬಸವಸಾಗರ ವೃತ್ತ, ಗುಡದನಾಳ ಕ್ರಾಸ್, ಬಸ್ಟಾಂಡ್ ವೃತ್ತ, ಜ್ಯೂನಿಯರ್ ಕಾಲೇಜು ಮೂಲಕ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಜಾಗೃತಿ ಮೂಡಿಸಿತು.

ಪಿಐ ಪುಂಡಲೀಕ ಪಟಾತಾರ ಸೇರಿ ಪೋಲಿಸ್ ಅಧಿಕಾರಿಗಳು ಹಾಗೂ ಸಿಬ್ಬಂಧಿಗಳು ರ್ಯಾಲಿಯಲ್ಲಿದ್ದರು.

# ಅಶ್ಫಾಕುಲ್ಲಾ ಖಾನ್ ಬ್ರಿಟಿಷರ ವಿರುದ್ಧ ತೊಡೆತಟ್ಟಿದ ಮಹಾವೀರ

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಅ.24–** ಅಶ್ಫಾಕುಲ್ಲಾ ಖಾನ್ ದೇಶದ ಸ್ವಾತಂತ್ರ್ಯ ಕ್ಕಾಗಿ ಬ್ರಿಟಿಷರ ವಿರುದ್ಧ ತೊಡೆತಟ್ಟಿ ತನ್ನ 27ನೇ ವಯಸ್ಸಿಗೆ ಬ್ರಿಟಿಷರ ನೇಣಿಗೆ ಕೊರಳು ಒಡ್ಡಿ ಹುತಾತ್ಮರಾಗಿ ವೀರಮರಣ ಹೊಂದಿದ ಕ್ರಾಂತಿಕಾರಿ ಸ್ವಾತಂತ್ರ ಹೋರಾಟಗಾರ ಅಂಜುಮಾನ್ ಕಮೀಟಿ ಅಧ್ಯಕ್ಷ ಅಬ್ದುಲ್ ಮೋಹಸಿನ್ ಅಹ್ಮದ್ ಹೇಳಿದರು.

ಹಿಂದೂಸ್ತಾನ್ ಸೋಶಿಯಲಿಸ್ಟ್ ರಿಪಬ್ಲಿಕನ್ ಅಸೋಸಿಯೇಷನ್ ಸಂಘಟನೆಯ ಸಹ ಸಂಸ್ಥಾಪಕರಾದ ಜನಾಬ್ ಅಶ್ಫಾಕುಲ್ಲಾ ಖಾನ್ ಸಾಹೇಬ್ರ ಜನ್ಮದಿನದ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪಾನಮನ ಸಲ್ಲಿಸಿದರು.



ಈ ಸಂಧರ್ಭದಲ್ಲಿ ಅಂಜುಮನ್ ಕಮಿಟಿಯ ಎಲ್ಲಾ ಸದಸ್ಯರು ಹಾಗೂ ಸಮುದಾಯದ ಬಾಂಧವರು ಸೇರಿ ಇತರರು ಇದ್ದರು.

# ವಕ್ಫ್ ಆಸ್ತಿಗಳ ದಾಖಲೆ ನೋಂದಣಿಗೆ ಸೂಚನ

**ರಾಯಚೂರು,ಅ.24–** ವಕ್ಫ್ ಕಾಯ್ದೆ ತಿದ್ದುಪಡಿ–2025ರಂತೆ ಎಲ್ಲಾ ನೋಂದಾಯಿತ ವಕ್ಫ್ ಸಂಸ್ಥೆಗಳ ವಿವರವನ್ನು ಸೆಂಟ್ರಲ್ ಉಮ್ಮಿದ್ ಪೋರ್ಟ್‌ನಲ್ಲಿ ನೋಂದಣಿ ಮಾಡುವುದು ಕಡ್ಡಾಯವಾಗಿದ್ದು, ಜಿಲ್ಲೆಯ ವಕ್ಫ್ ಆಸ್ತಿಗಳ ದಾಖಲೆಗಳನ್ನು ವೆಬ್‌ಸೈಟ್ ವಿಳಾಸ: https://umeed.minorityaffairs.gov.in/ ನಲ್ಲಿ 2025ರ ಡಿಸೆಂಬರ್ 05ರೊಳಗಾಗಿ ನೋಂದಣಿ ಮಾಡಬೇಕೆಂದು ಜಿಲ್ಲಾ ವಕ್ಫ್ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ದುಂಡಾಣು ಎಲೆ ಅಂಗಮಾರಿ ರೋಗ ನಿರ್ವಹಣೆಗೆ ಅಗತ್ಯ ಕ್ರಮಕೈಗೊಳ್ಳಲು ಸೂಚನೆ

**ರಾಯಚೂರು,ಅ.24–** ಜಿಲ್ಲೆಯಲ್ಲಿ ಇತ್ತೀಚೆಗೆ ಸುರಿಯುತ್ತಿರುವ ಮಳೆಯಿಂದ ಸಿಂಧನೂರು ತಾಲ್ಲೂಕಿನ ಕೆಲವೊಂದು ಗ್ರಾಮಗಳಲ್ಲಿ ಭತ್ತದ ಬೆಳೆಯಲ್ಲಿ ದುಂಡಾಣು ಎಲೆ ಅಂಗಮಾರಿ ರೋಗ ಕಂಡುಬಂದಿದ್ದು, ರಾಯಚೂರಿನ ಕೃಷಿ ವಿಶ್ವ ವಿದ್ಯಾಲಯದ ವಿಜ್ಞಾನಿಗಳು ತಿಳಿಸಿರುವಂತೆ ಹೆಚ್ಚಿನ ಮಳೆ/ ತೇವಾಂಶವು ದುಂಡಾಣು ಎಲೆ ಅಂಗಮಾರಿ ರೋಗವು ಉಲ್ಬಣಗೊಳ್ಳಲು ಅನುಕೂಲಕರವಾದ ವಾತಾವರಣವಾಗಿದ್ದು, ರೋಗದ ನಿರ್ವಹಣಾ ಕ್ರಮಗಳನ್ನು ಕೈಗೊಳ್ಳುವಂತೆ ಕೋರಲಾಗಿದೆ.

ದುಂಡಾಣು ಎಲೆ ಅಂಗಮಾರಿ ರೋಗ ನಿರೋದಕ ತಳಿಗಳಾದ ಆರ್.ಪಿ.ಬಯೋ 226 (ಸುಧಾರಿತ ಸೋನಾ ಮಸೂರಿ) ಮತ್ತು ಡಿ.ಆರ್.ಆರ್ ದಾನ್ 53 ಬೆಳೆಯುವುದು. ಬಿತ್ತನೆ ಬೀಜವನ್ನು ಸ್ಟ್ರೆಪ್ಟೋಸೈಕ್ಲಿನ 0.1 ಗ್ರಾಂ. ಮತ್ತು 0.5 ಗ್ರಾಂ. ತಾಮ್ರದ ಆಕ್ಸಿಕ್ಲೋರೈಡ್ 50 ಡಬ್ಲೂಪಿ ಪ್ರತಿ ಲೀಟರ್ ನೀರಿನಲ್ಲಿ ಕರಗಿಸಿ ತಯಾರಿಸಿದ ದ್ರಾವಣದಲ್ಲಿ ಇಪ್ಪತ್ತು ನಿಮಿಷಗಳ ಕಾಲ ನೆನಸಿ ಬಿತ್ತಬೇಕು. ಕಣಿವೆಗಳಲ್ಲಿ ಬೆಳೆದ ಕಳೆಗಳನ್ನು ತೆಗೆದು ಬದುಗಳನ್ನು ಸ್ವಚ್ಛವಾಗಿಡಬೇಕು. ಹೊಲದಲ್ಲಿ ರೋಗದ ಲಕ್ಷಣ ಕಂಡ ತಕ್ಷಣ ಸ್ಟ್ರೆಪ್ಟೋಸೈಕ್ಲಿನ 0.1 ಗ್ರಾಂ. ಮತ್ತು 0.5 ಗ್ರಾಂ. ತಾಮ್ರದ ಆಕ್ಸಿಕ್ಲೋರೈಡ್ 50 ಡಬ್ಲೂಪಿ ಪ್ರತಿ ಲೀಟರ್ ನೀರಿನಲ್ಲಿ ಕರಗಿಸಿ ಸಿಂಪಡಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಆಯಾ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಚೇರಿ, ಕೃಷಿ ವಿಸ್ತರಣಾ ಘಟಕ ಅಥವಾ ಕೃಷಿ ವಿಜ್ಞಾನ ಕೇಂದ್ರವನ್ನು ಸಂಪರ್ಡಸುವಂತೆ ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬ್ಯೂಟಿ ಪಾರ್ಲರ್ ನಿರ್ವಹಣೆಗೆ ಅರ್ಜಿ ಆಹ್ವಾನ

**ರಾಯಚೂರು,ಅ.24–** ಇಲ್ಲಿನ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ (ಆರ್‌ಸೇಟಿ) ಇವರ ವತಿಯಿಂದ ಗ್ರಾಮೀಣ ನಿರುದ್ಯೋಗಿ ಮಹಿಳೆಯರಿಗಾಗಿ ಬ್ಯೂಟಿ ಪಾರ್ಲರ್ ನಿರ್ವಹಣೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿಯು 35ದಿನಗಳ ಕಾಲ ಇರುತ್ತದೆ. ತರಬೇತಿಯ ಅವಧಿಯಲ್ಲಿ ಅಭ್ಯರ್ಥಿಗಳಿಗೆ ಉಚಿತ ಊಟ ಹಾಗೂ ಉಚಿತ ವಸತಿ ಸೌಕರ್ಯದ ವ್ಯವಸ್ಥೆ ಇರುತ್ತದೆ. ಆಸಕ್ತರು 8ನೇ ತರಗತಿ ವ್ಯಾಸಂಗ ಮಾಡಿರುವ 18 ರಿಂದ 45 ವರ್ಷದೊಳಗಿನ ವಯಸ್ಸು ಹೊಂದಿರುವ ಗ್ರಾಮೀಣ ಭಾಗದ ಬಿಪಿಎಲ್ ಅಭ್ಯರ್ಥಿಗಳು ಆಧಾರ್ ಕಾರ್ಡ್ ಜೆರಾಕ್ಸ್, ಗ್ರಾಮೀಣ ಪಡಿತರ ಚೀಟಿ (ಬಿಪಿಎಲ್, ಪಿಎಚ್‌ಎಚ್, ಎನ್‌ಪಿಎಚ್‌ಎಚ್ ಮತ್ತು ಆಯ್‌ವೈ) ಜೆರಾಕ್ಸ್ , 4 ಫೋಟೋಗಳು, ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ್ ಹಾಗೂ ಪ್ಯಾನ್ ಕಾರ್ಡ್ ಜೆರಾಕ್ಸೊಂದಿಗೆ ಅಕ್ಟೋಬರ್ 27ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು ಸ್ಟೇಟ್ ಬ್ಯಾಂಕ್‌ಆಫ್‌ಇಂಡಿಯಾ ಗ್ರಾಮೀಣ ಸ್ವಯಂಉದ್ಯೋಗತರಬೇತಿ ಸಂಸ್ಥೆ (ಆರ್‌ಸೇಟಿ) ಆಶಾಪೂರುರಸ್ತೆ, ರಾಯಚೂರು. ಅಥವಾ ಮೊಬೈಲ್ ಸಂಖ್ಯೆ: 8217382735, 9742470999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಗ್ರಾಮೀಣ ಸ್ವಯಂಉದ್ಯೋಗತರಬೇತಿ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಮಲನಗರದಲ್ಲಿ ಗಮನ ಸೆಳೆದ ಆರ್.ಎಸ್.ಎಸ್ ಪಥ ಸಂಚಲನ



**ಕಮಲನಗರ,ಅ.24–**ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಶತಾಬ್ದಿ ವರ್ಷ ಹಾಗೂ ವಿಜಯದಶಮಿಯ ಅಂಗವಾಗಿ ಅ.19ರಂದು ಕಮಲನಗರದಲ್ಲಿ ಸಹಸ್ರಾರು ಗಣವೇಷಧಾರಿ ಸ್ವಯಂ ಸೇವಕರು ಪಥ ಸಂಚಲನ ನಡೆಸಿ ಗಮನ ಸೆಳೆದರು.

ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಬಿಳಿ ಅಂಗಿ, ಖಾಕಿ ಪ್ಯಾಂಟು, ಕಪ್ಪು ಟೊಪ್ಪಿಗೆ, ಕೈಯಲ್ಲಿ ಲಾಠಿ ಹಿಡಿದು ಶಿಸ್ತಿನಿಂದ ಪಥ ಸಂಚಲನ ನಡೆಸುತ್ತಿದ್ದ ಸ್ವಯಂ ಸೇವರ ಮೇಲೆ ಪುಷ್ಪಮಳೆ ಸುರಿಸಿ ಗೌರವ ಸಲ್ಲಿಸಿದರು. ಶಿಸ್ತಿನ ಶಿಪಾಯಿಗಳಂತೆ ಪಥ ಸಂಚಲನ ಮಾಡುತ್ತಿದ್ದ ಗಣವೇಶಧಾರಿಗಳು ನೋಡುಗರ ಗಮನ ಸೆಳೆದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H